# ಅನಂತ ಜನಶಕ್ತಿ

ANANTA JANASHAKTHI — KANNADA DAILY NEWS PAPER

ಸಂಪಾದಕ: ಎಸ್.ವೆಂಕಟೇಸುಲು | ಬಳ್ಳಾರಿ ಜಿಲ್ಲೆಯಿಂದ ಪ್ರಕಟಿತ ಕನ್ನಡ ದೈನಿಕ | EDITOR : S VENKATESULU

ಸಂಪುಟ : 01 ಸಂಚಿಕೆ : 70 ರಿ.ನಂ : ಕೆಎನ್‌ಎಎನ್ / 26 / ಎ5487 ಬಳ್ಳಾರಿ ಗುರುವಾರ ದಿನಾಂಕ : 24-09-2026 ಪುಟ : 04 ಬೆಲೆ : 2-00

## ಇಂದಿನ ಪ್ರಮುಖ

- ಕೆಎಸ್‌ಒಯುನಲ್ಲಿ ಎರಡು ಪದವಿ ಪಡೆಯಲು ಅವಕಾಶ ಸೆ.30ರವರೆಗೆ ದೂರಶಿಕ್ಷಣ ಪ್ರವೇಶ 04
- ಪ್ರತಾಪ್ ಸಿಂಹ ಅವರನ್ನು ರಾಜ್ಯದಿಂದ ಗಡಿಪಾರು ಮಾಡಲು ಡಿಎಸ್‌ಎಸ್ ಆಗ್ರಹ 04
- ಏಕಸ್ ಏರೋಸ್ಪೇಸ್ ಕ್ಯಾಂಪಸ್ ಸಂದರ್ಶನ: ಬಿಎಲ್‌ಡಿಇ ಎಂಜಿನಿಯರಿಂಗ್ ಕಾಲೇಜಿನ 19 ವಿದ್ಯಾರ್ಥಿಗಳ ಆಯ್ಕೆ 02
- ಎಸ್‌ಐಆರ್‌ಗೆ ಇನ್ನೂ ಆರು ತಿಂಗಳು ಕಾಲಾವಕಾಶ ನೀಡಿ: ಕರೂರ್ ಮಾಧವ ರೆಡ್ಡಿ 03
- ಮಕ್ಕಳ ಚಿತ್ರಕಲಾ ಪ್ರದರ್ಶನಕ್ಕೆ ಚಾಲನೆ ವಿಜೇತರಿಗೆ ಪ್ರಶಸ್ತಿ, ಪ್ರಮಾಣಪತ್ರ ವಿತರಣೆ 03

# ಸರ್ಕಾರದ ಖಜಾನೆ ಖಾಲಿ:

## ಸರ್ಕಾರದ ವಿರುದ್ಧ ಬಿಜೆಪಿ-ಜೆಡಿಎಸ್ ಪ್ರತಿಭಟನೆ



ಬೆಂಗಳೂರು: ರಾಜ್ಯದ ಆರ್ಥಿಕ ಸ್ಥಿತಿ ಸಂಕಷ್ಟದತ್ತ ಸಾಗುತ್ತಿದೆ ಹಾಗೂ ಅಭಿವೃದ್ಧಿ ಕಾರ್ಯಗಳಿಗೆ ಹಿನ್ನಡೆ-ಯಾಗಿದೆ ಎಂದು ಆರೋಪಿಸಿ ರಾಜ್ಯದ ಬಿಜೆಪಿ ನಾಯಕರು ವಿಧಾನಸೌಧದ ಆವರಣದಲ್ಲಿ ಬುಧವಾರ ಪ್ರತಿಭಟನೆ ನಡೆಸಿದರು.

ರಾಜ್ಯದಲ್ಲಿ ಸದ್ಯದ ಸೀಮಿತ ಆರ್ಥಿಕ ಅವಕಾಶವನ್ನು ಗಮನದಲ್ಲಿಟ್ಟುಕೊಂಡು

2ನೇ ಪುಟಕ್ಕೆ...

## ಕೆಪಿಎಸ್‌ಸಿ ಮುಚ್ಚುವೆ: ಸಿಎಂ ಹೇಳಿಕೆ ಬುದ್ಧಿಗೇಡಿತನ, ಅಜ್ಞಾನ; ಸಚಿವ ಕುಮಾರಸ್ವಾಮಿ



ನವದೆಹಲಿ; ಕೆಪಿಎಸ್‌ಸಿಯನ್ನು ಮುಚ್ಚಲು ಕಾನೂನು ತಜ್ಞರ ಜತೆ ಚರ್ಚೆ ನಡೆಸುತ್ತಿದ್ದೇವೆ ಎಂದು ಹೇಳಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿರುದ್ಧ ಹರಿಹಾಯ್ದಿರುವ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು; ಮುಖ್ಯಮಂತ್ರಿಗೆ ಶಾಸನದ ಮಹತ್ವವೇ ಗೊತ್ತಿಲ್ಲದಂತಿದೆ ಎಂದು ಟೀಕಿಸಿದ್ದಾರೆ.

ಈ ಬಗ್ಗೆ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವ

2ನೇ ಪುಟಕ್ಕೆ...

## ಬರ ಪೀಡಿತ ಪಟ್ಟಿಯಿಂದ ಕೈಬಿಟ್ಟಿದ್ದಕ್ಕೆ ಬೇಸರ: ಶಾಸಕ ಪಾಟೀಲ್ ರಾಜೀನಾಮೆ



ಸಪ್ತಸಾಗರ ವಾರ್ತೆ, ವಿಜಯಪುರ, ಸೆ. 23: ವಿಜಯಪುರ ಜಿಲ್ಲೆಯ ಇಂಡಿ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಶಾಸಕ ಯಶವಂತರಾಯಗೌಡ ವ್ಹಿ. ಪಾಟೀಲ್ ಅವರು ಇಂಡಿ ಹಾಗೂ ಚಡಚಣ ತಾಲೂಕುಗಳನ್ನು ಬರಪೀಡಿತ ಪ್ರದೇಶಗಳ ಪಟ್ಟಿಗೆ ಸೇರಿಸದಿರುವುದನ್ನು ವಿರೋಧಿಸಿ ಬುಧವಾರ ಶಾಸಕ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದಾರೆ. ವಿಧಾನಸಭಾ ಅಧಿವೇಶನ ನಡೆಯುತ್ತಿರುವ ಸಂದರ್ಭದಲ್ಲೇ ಅವರು ವಿಧಾನಸಭಾಧ್ಯಕ್ಷ ಜಿ.ಎಸ್.

3ನೇ ಪುಟಕ್ಕೆ...

## ಮೋದಿ 800 ರೈತರನ್ನು ಕೊಲೆ ಮಾಡಿದ್ದಾರೆ: ಹರಿಪ್ರಸಾದ್ ಹೇಳಿಕೆಗೆ ಆಕ್ರೋಶ



ಬೆಂಗಳೂರು: ವಿಧಾನ ಪರಿಷತ್‌ನ ವಿಶೇಷ ಅಧಿವೇಶನದ ಎರಡನೇ ದಿನವಾದ ಬುಧವಾರ ಆಡಳಿತ ಪಕ್ಷ ಮತ್ತು ಪ್ರತಿಪಕ್ಷದ ಸದಸ್ಯರ ನಡುವೆ ತೀವ್ರ ವಾಗ್ವಾದ ನಡೆಯಿತು.

ಪ್ರಧಾನಿ ಮೋದಿ ವಿರುದ್ಧ ಕೆಪಿಸಿಸಿ ಅಧ್ಯಕ್ಷ ಹಾಗೂ ವಿಧಾನ ಪರಿಷತ್ ಸದಸ್ಯ ಬಿ.ಕೆ. ಹರಿಪ್ರಸಾದ್ ನೀಡಿದ ಹೇಳಿಕೆ ಹಾಗೂ ಪ್ರತಿಪಕ್ಷದ ಚರ್ಚೆಗೆ ಆಡಳಿತ ಪಕ್ಷದ ಸದಸ್ಯರು ಪದೇಪದೇ

2ನೇ ಪುಟಕ್ಕೆ...

## 'ವಂದೇ ಮಾತರಂ' ಕಡ್ಡಾಯವಲ್ಲ, ಹೈಕೋರ್ಟ್‌ಗೆ ಸರ್ಕಾರ ಉತ್ತರ



ಬೆಂಗಳೂರು: ರಾಷ್ಟ್ರಗೀತೆಯಾದ 'ಜನ ಗಣ ಮನ'ದಂತೆ 'ವಂದೇ ಮಾತರಂ' ಹಾಡುವುದನ್ನು ಕಡ್ಡಾಯಗೊಳಿಸಲಾಗಿಲ್ಲ ಎಂದು ಸರ್ಕಾರ ಹೈಕೋರ್ಟ್‌ಗೆ ತಿಳಿಸಿದೆ. ರಾಜ್ಯ ಸರ್ಕಾರದ ಕಾರ್ಯಕ್ರಮಗಳಲ್ಲಿ 'ವಂದೇ ಮಾತರಂ'ನ ಮೊದಲ ಎರಡು ಚರಣಗಳನ್ನು ಮಾತ್ರ ಹಾಡುವುದನ್ನು ಕಡ್ಡಾಯಗೊಳಿಸಿರುವ ತನ್ನ ಸುತ್ತೋಲೆಯನ್ನು ಸಮರ್ಥಿಸಿಕೊಂಡ ಸರ್ಕಾರ, ರಾಷ್ಟ್ರಗೀತೆಗೆ ಇರುವ ಕಡ್ಡಾಯ ನಿಯಮಗಳು ರಾಷ್ಟ್ರೀಯ

3ನೇ ಪುಟಕ್ಕೆ...

## 'ಗೌರವಯುತ ಲಂಚ'ದ ಹೇಳಿಕೆಗೆ ಸಚಿವ ಶಿವಲಿಂಗೇಗೌಡ ಸ್ಪಷ್ಟನೆ



ಬೆಂಗಳೂರು: ಲಂಚದ ವಿಷಯವಾಗಿ ಅಧಿಕಾರಿಗಳಿಗೆ ಗೌರವಯುತವಾಗಿ ಕೊಡೋದು ನಿಮ್ಮ ಧರ್ಮ ಎಂಬ ಹೇಳಿಕೆಗೆ ಸಂಬಂಧಿಸಿದಂತೆ ಸಚಿವ ಶಿವಲಿಂಗೇಗೌಡ ಅವರು ಬುಧವಾರ ಸ್ಪಷ್ಟನೆ ನೀಡಿದ್ದು, ನಾನು ಅಧಿಕಾರಿಗಳೊಂದಿಗೆ ಗೌರವಯುತವಾಗಿ ನಡೆದುಕೊಳ್ಳಿ ಎಂದು ಹೇಳಿದ್ದೇನೆ. ದುಡ್ಡು

3ನೇ ಪುಟಕ್ಕೆ...


# ದೇಶದ್ರೋಹ ಮಾಡಿದರೆ ಜೈಲು: ರಾಹುಲ್ ಗಾಂಧಿ ಎಚ್ಚರಿಕೆ

ನವದೆಹಲಿ: ನೀವು ಮಾಡಿರುವುದು ದೇಶದ್ರೋಹ, ನಾನು ಚುನಾವಣಾ ಆಯೋಗ ಮತ್ತು ಅದರ ಅಧಿಕಾರಿಗಳಿಗೆ ಸ್ಪಷ್ಟವಾಗಿ ಹೇಳುತ್ತಿದ್ದೇನೆ. ಸಮಯ ಬಂದೇ ಬರುತ್ತೆ, ನೀವು ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ, ನಿಮ್ಮನ್ನ ಹಿಡಿಯುತ್ತೇನೆ ಎಂದು ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ ಎಚ್ಚರಿಕೆ ನೀಡಿದ್ದಾರೆ.

ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ ವಿಚಾರದಲ್ಲಿ ಚುನಾವಣಾ ಆಯೋಗದೊಳಗೆ ಆಂತರಿಕ ಭಿನ್ನಮತ ಉಂಟಾಗಿದೆ ಎನ್ನುವ ವರದಿ ಬೆನ್ನಲ್ಲೇ ಲೋಕಸಭೆ ವಿಪಕ್ಷ ನಾಯಕ ರಾಹುಲ್ ಗಾಂಧಿ, ಎಕ್ಸ್ ಖಾತೆಯಲ್ಲಿ ವಿಡಿಯೋ ಪೋಸ್ಟ್ ಹಂಚಿಕೊಂಡಿದ್ದು ಆಯೋಗದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಚುನಾವಣಾ ಆಯೋಗದ ಕ್ರಮಗಳು ಜನರ ಹಿತಾಸಕ್ತಿಗೆ ವಿರುದ್ಧವಾಗಿವೆ. ಆಯೋಗ ಕೈಗೊಳ್ಳುತ್ತಿರುವ

3ನೇ ಪುಟಕ್ಕೆ...




## ನವರಾತ್ರಿ ಸಮಯದಲ್ಲಿ ಸಂಸತ್ ಅಧಿವೇಶನ ಸಾಧ್ಯತೆ

ನವದೆಹಲಿ: ನವರಾತ್ರಿ ಸಂದರ್ಭದಲ್ಲಿ ಸಂಸತ್ತಿನ ವಿಶೇಷ ಅಧಿವೇಶನ ಕರೆಯುವ ಬಗ್ಗೆ ಕೇಂದ್ರ ಸರ್ಕಾರ ಚಿಂತನೆ ನಡೆಸುತ್ತಿದೆ.

ಮಹಿಳಾ ಮೀಸಲಾತಿ ಮತ್ತು ಕ್ಷೇತ್ರ ಪುನರ್‌ವಿಂಗಡಣೆ ಕುರಿತ ಶಾಸನಾತ್ಮಕ ಪ್ರಕ್ರಿಯೆಯನ್ನು ಮುಂದುವರಿಸುವ ನಿಟ್ಟಿನಲ್ಲಿ ವಿಶೇಷ ಅಧಿವೇಶನ ನಡೆಸುವ ಸಾಧ್ಯತೆ ಇದೆ ಎಂದು ಮೂಲಗಳು ತಿಳಿಸಿವೆ.

ಅಕ್ಟೋಬರ್ 11ರಿಂದ 15ರ ನಡುವೆ ವಿಶೇಷ ಅಧಿವೇಶನ ನಡೆಸಲು ಕೇಂದ್ರ ಸರ್ಕಾರ

3ನೇ ಪುಟಕ್ಕೆ...



## ದೇವೇಗೌಡರನ್ನು ಭೇಟಿ ಮಾಡಿದ ಪ್ರತಾಪ್ ರೆಡ್ಡಿ



ಬಳ್ಳಾರಿ, ಸೆ.23: ಜೆಡಿಎಸ್ ಮುಖಂಡ ಹಾಗೂ ಮಾಜಿ ಪ್ರಧಾನಮಂತ್ರಿ ಎಚ್.ಡಿ. ದೇವೇಗೌಡ ಅವರನ್ನು ನಾಡಾ ಪ್ರತಾಪ್ ರೆಡ್ಡಿ ಅವರು ಭೇಟಿ ಮಾಡಿ ಆರೋಗ್ಯ ವಿಚಾರಿಸಿದರು.ಈ ಸಂದರ್ಭದಲ್ಲಿ

3ನೇ ಪುಟಕ್ಕೆ....

## ಪೌರಕಾರ್ಮಿಕರ ಕಲ್ಯಾಣಕ್ಕೆ ಅಧಿಕಾರಿಗಳು ಸ್ಪಂದನಾಶೀಲರಾಗಿ ಕಾರ್ಯನಿರ್ವಹಿಸಿ; ಡಿಸಿ




ಬಳ್ಳಾರಿ, ಸೆ.23: ಪೌರಕಾರ್ಮಿಕರು ಹಾಗೂ ಅವರ ಕುಟುಂಬಗಳ ಕಲ್ಯಾಣಕ್ಕಾಗಿ ಅಧಿಕಾರಿಗಳು ಸ್ಪಂದನಾಶೀಲರಾಗಿ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್‌ಕೆ ಕರೆ ನೀಡಿದರು.

ನಗರದಲ್ಲಿ ಪೌರಕಾರ್ಮಿಕರ ದಿನಾಚರಣೆ ಅಂಗವಾಗಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪೌರಕಾರ್ಮಿಕರು ನಗರವನ್ನು ಸ್ವಚ್ಛವಾಗಿಡುವಲ್ಲಿ ಮಹತ್ವದ ಪಾತ್ರ ವಹಿಸುತ್ತಿದ್ದಾರೆ. ಅವರ ಸೇವೆಯನ್ನು ಗುರುತಿಸಿ ಅಗತ್ಯ ಸೌಲಭ್ಯಗಳನ್ನು ಕಲ್ಪಿಸುವುದು ಅಧಿಕಾರಿಗಳ ಜವಾಬ್ದಾರಿಯಾಗಿದೆ ಎಂದರು.

ಪೌರಕಾರ್ಮಿಕರು ಪ್ರತಿನಿತ್ಯ ತಮ್ಮ ಕರ್ತವ್ಯದಲ್ಲಿ

2ನೇ ಪುಟಕ್ಕೆ...

## ಅರ್ಕಾಟ್ ದರ್ಗಾ ಉರುಸು: ವಿಜಯಪುರದಲ್ಲಿ ಭವ್ಯ ಸದ್ಭಾವನಾ ಯಾತ್ರೆ



ವಿಜಯಪುರ, ಸೆ. 23: ಮಾನವೀಯತೆ, ಶಾಂತಿ ಹಾಗೂ ಸದ್ಭಾವನೆಯ ಸಂದೇಶ ಸಾರಿದ ಹಜರತ್ ಗೌಸ್-ಏ-ಆಜಂ ಅವರ ಸ್ಮರಣೆ ಹಾಗೂ ಸರ್ವಧರ್ಮ ಸಮನ್ವಯತೆಯ ಕೇಂದ್ರವಾಗಿರುವ ಐತಿಹಾಸಿಕ ಹಜರತ್ ಅರ್ಕಾಟ್ ದರ್ಗಾದ ಉರುಸು ಅಂಗವಾಗಿ

3ನೇ ಪುಟಕ್ಕೆ...

## ಕಲ್ಯಾಣ ಕರ್ನಾಟಕದಲ್ಲಿ ಎಎಸ್ ಎಂ ಕಾಲೇಜಿನಿಂದ ಗುಣಮಟ್ಟದ ಶಿಕ್ಷಣ: ಡಿಸಿ

ಬಳ್ಳಾರಿ, ಸೆ.23; ವೀರಶೈವ ವಿದ್ಯಾವರ್ಧಕ ಸಂಘವು ಬಳ್ಳಾರಿಯ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾಗಿದ್ದು, 45ಕ್ಕೂ ಹೆಚ್ಚು ಶಿಕ್ಷಣ ಸಂಸ್ಥೆಗಳನ್ನು ಹೊಂದಿದೆ. ಈ ಮಹಿಳಾ ಮಹಾವಿದ್ಯಾಲಯವು

ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಗುಣಮಟ್ಟದ ಶಿಕ್ಷಣ ನೀಡುವ ಪ್ರಮುಖ ಸಂಸ್ಥೆಯಾಗಿದೆ ಎಂದು ನಗರದ ಮಾಜಿ ಶಾಸಕ ಗಾಲಿ ಸೋಮಶೇಖರ ರೆಡ್ಡಿ ಹೇಳಿದರು. ಅವರು ನಿನ್ನೆ ಅಲ್ಲಂ ಸುಮಂಗಳಮ್ಮ ಸ್ಮಾರಕ ಮಹಿಳಾ ಮಹಾವಿದ್ಯಾಲಯದ ಸುವರ್ಣ ಮಹೋತ್ಸವದ

3ನೇ ಪುಜಕ್ಕೆ...



ಒಂದನೇ ಪುಟದಿಂದ...

# ಸರ್ಕಾರದ ಖಜಾನೆ ಖಾಲಿ:

## ಸರ್ಕಾರದ ವಿರುದ್ಧ ಬಿಜೆಪಿ–ಜೆಡಿಎಸ್ ಪ್ರತಿಭಟನೆ

ಪ್ರಮುಖ ವೆಚ್ಚದ ಯೋಜನೆಗಳನ್ನು ಕೈಗೆತ್ತಿಕೊಳ್ಳುವಾಗ ಎಚ್ಚರಿಕೆ ವಹಿಸಬೇಕು ಎಂದು ಕರ್ನಾಟಕ ಹಣಕಾಸು ಇಲಾಖೆ ರಾಜ್ಯ ಸರ್ಕಾರಕ್ಕೆ ಮಂಗಳವಾರ ಸೂಚಿಸಿತ್ತು. ನಿಧಿ ಹಂಚಿಕೆಯಲ್ಲಿ 'ವಾಸ್ತವಿಕ ಮತ್ತು ವಿವೇಕಯುತ' ನಿಲುವು ಅಗತ್ಯ ಎಂದು ಇಲಾಖೆ ಹೇಳಿತ್ತು.

ಮುಖ್ಯಮಂತ್ರಿಗಳ ಗ್ರಾಮೀಣ ರಸ್ತೆ ಸಂಪರ್ಕ ಯೋಜನೆಗೆ ಸಂಬಂಧಿಸಿದ ಪ್ರಸ್ತಾವನೆಯನ್ನು ಪರಿಶೀಲಿಸುವ ವೇಳೆ ಹಣಕಾಸು ಇಲಾಖೆ ಮಂಗಳವಾರ ಈ ಎಚ್ಚರಿಕೆ ನೀಡಿತ್ತು. ಸುಮಾರು ರೂ.10,000 ಕೋಟಿ ವೆಚ್ಚದ ಈ ಯೋಜನೆಯನ್ನು 2026–27 ಮತ್ತು 2027–28ನೇ ಸಾಲಿನಲ್ಲಿ ಅನುಷ್ಠಾನಗೊಳಿಸಲು ಪ್ರಸ್ತಾಪಿಸಲಾಗಿತ್ತು.

ಬಜೆಟ್‌ನಲ್ಲಿ ಅನುದಾನ ಮೀಸಲಿಡದ ಅಥವಾ ಹಣವನ್ನು ನಿಗದಿಪಡಿಸದ ದೊಡ್ಡ ಯೋಜನೆಯನ್ನು ಆರಂಭಿಸುವುದರಿಂದ ನಗದು ಹರಿವು ಹಾಗೂ ಹಣಕಾಸು ನಿರ್ವಹಣೆಯಲ್ಲಿ ಸವಾಲುಗಳು ಎದುರಾಗಬಹುದು ಎಂದು ಹಣಕಾಸು ಇಲಾಖೆ ತನ್ನ ಟಿಪ್ಪಣಿಯಲ್ಲಿ ತಿಳಿಸಿತ್ತು.

ಇದರ ಬೆನ್ನಲ್ಲೇ ವಿಧಾನಸೌಧದ ಕೆಂಗಲ್ ಹನುಮಂತಯ್ಯ ಪ್ರತಿಮೆ ಬಳಿ ಬಿಜೆಪಿ ಪ್ರತಿಭಟನೆ ನಡೆಸಿದೆ. ಪ್ರತಿಭಟನೆಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ವಿಧಾನಸಭೆ ಪ್ರತಿಪಕ್ಷ ನಾಯಕ ಆರ್. ಅಶೋಕ್ ಹಾಗೂ ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ನೇತೃತ್ವ ವಹಿಸಿದ್ದರು. ಬಿಜೆಪಿ ಶಾಸಕರು ಹಾಗೂ ವಿಧಾನ ಪರಿಷತ್ ಸದಸ್ಯರೂ ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು. ರಾಜ್ಯದಲ್ಲಿ ಸಮರ್ಪಕ ಆಡಳಿತ ನೀಡಬೇಕು ಎಂದು ಆಗ್ರಹಿಸಿದ್ದಾರೆ.

ಹಣಕಾಸು ಇಲಾಖೆಯ ಇತ್ತೀಚಿನ ಅಭಿಪ್ರಾಯಗಳು ರಾಜ್ಯದ ಆರ್ಥಿಕ ಪರಿಸ್ಥಿತಿಯನ್ನು ಬಹಿರಂಗಪಡಿಸಿವೆ ಎಂದು ಬಿಜೆಪಿ ನಾಯಕರು ಆರೋಪಿಸಿದರು.

ರಾಜ್ಯದ ಆರ್ಥಿಕ ಮಿತಿಗಳ ನಡುವೆಯೂ ಕಾಂಗ್ರೆಸ್ ಸರ್ಕಾರ 'ಸುಳ್ಳು ಭರವಸೆಗಳನ್ನು' ನೀಡುತ್ತಿದೆ ಹಾಗೂ ಕರ್ನಾಟಕದಲ್ಲಿ ಅಭಿವೃದ್ಧಿ ಕಾರ್ಯಗಳು ಕುಂಠಿತವಾಗಿವೆ ಎಂದು ದೂರಿದರು.

ಈ ನಡುವೆ ಹಣಕಾಸು ಇಲಾಖೆಯ ಸಲಹೆಯನ್ನು ಮುಖ್ಯಮಂತ್ರಿ ಹಾಗೂ ಹಣಕಾಸು ಖಾತೆಯನ್ನೂ ಹೊಂದಿರುವ ಡಿ.ಕೆ. ಶಿವಕುಮಾರ್ ಅವರು ಮಂಗಳವಾರ ಒಪ್ಪಿಕೊಂಡಿದ್ದು, ಸರ್ಕಾರದ ಹಿತದೃಷ್ಟಿಯಿಂದ ಹಣಕಾಸು ಇಲಾಖೆ ಎಚ್ಚರಿಕೆ ನೀಡುವುದರಲ್ಲಿ ಯಾವುದೇ ತಪ್ಪಿಲ್ಲ ಎಂದು ಹೇಳಿದ್ದರು.

ಹಣಕಾಸು ಇಲಾಖೆಯ ಅಂದಾಜಿನ ಪ್ರಕಾರ, 2026–27 ರ ಕರ್ನಾಟಕದ ವಿತ್ತೀಯ ಕೊರತೆಯು ವಿತ್ತೀಯ ಜವಾಬ್ದಾರಿ ಮತ್ತು ಬಜೆಟ್ ನಿರ್ವಹಣೆ ಚೌಕಟ್ಟಿನ ಅಡಿಯಲ್ಲಿ ಅನುಮತಿಸಲಾದ ಶೇಕಡಾ 3 ರ ಮಿತಿಯ ವಿರುದ್ಧ 2.95 ಶೇಕಡಾ ಎಂದು ಯೋಜಿಸಲಾಗಿದೆ. ರಾಜ್ಯದಲ್ಲಿ ಪ್ರಸ್ತುತ ನಡೆಯುತ್ತಿರುವ ಕಾಮಗಾರಿಗಳ ಬಾಕಿ ವೆಚ್ಚ 2 ಲಕ್ಷ ಕೋಟಿ ರೂ.ಗಳನ್ನು ಮೀರಿರುವುದನ್ನು ಗಮನಿಸಿದ ಹಣಕಾಸು ಇಲಾಖೆಯು ರಾಜ್ಯದ ಅಸ್ತಿತ್ವದಲ್ಲಿರುವ ಬದ್ಧತೆಗಳತ್ತ ತಿರುಗಿ ನೋಡುವಂತೆ ಮಾಡಿದೆ.

ಇದರಂತೆ ಲೋಕೋಪಯೋಗಿ ಇಲಾಖೆ, ಜಲಸಂಪನ್ಮೂಲ ಇಲಾಖೆ, ಸಣ್ಣ ನೀರಾವರಿ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳಲ್ಲಿನ ಬಾಕಿ ಬಿಲ್‌ಗಳ ಮೊತ್ತವೇ ರೂ.36,136 ಕೋಟಿಯಷ್ಟಿದೆ ಎಂದು ಹಣಕಾಸು ಇಲಾಖೆ ತಿಳಿಸಿದೆ.

# ಕೆಪಿಎಸ್‌ಸಿ ಮುಚ್ಚುವೆ: ಸಿಎಂ ಹೇಳಿಕೆ

## ಬುದ್ಧಿಗೇಡಿತನ, ಅಜ್ಞಾನ; ಸಚಿವ ಕುಮಾರಸ್ವಾಮಿ

ಎರಡನೇ ದಿನದ 'ಗುರು ವಂದನಾ' ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡುತ್ತಿದ್ದರು. ಹೆಣ್ಣು ಮಕ್ಕಳಿ ಉನ್ನತ ಶಿಕ್ಷಣ ಪಡೆಯಬೇಕೆಂಬ ಹಂಬಲ ಹೊಂದಿದ್ದಾಗ ಹೆಣ್ಣು ಮಕ್ಕಳ ಪ್ರತ್ಯೇಕ ಕಾಲೇಜಿಗಾಗಿ ದೂರದ ನಗರಗಳಿಗೆ ತೆರಳಬೇಕಾದ ಪರಿಸ್ಥಿತಿಯಲ್ಲಿ ಕಳೆದ ಐದು ದಶಕಗಳ ಹಿಂದೆಯೇ ಇಲ್ಲಿ ಮಹಿಳಾ ಕಾಲೇಜು ಆರಂಭಿಸಿ ಈ ಭಾಗದ ಹೆಣ್ಣು ಮಕ್ಕಳನ್ನು ಪದವೀಧರರನ್ನಾಗಿ ಮಾಡಿದ ಕೀರ್ತಿ ವೀ.ವಿ.ಸಂಘಕ್ಕೆ ಸೇರುತ್ತದೆಂದರು.

ಮರಿ ಕೊಟ್ಟೂರು ಸ್ವಾಮೀಜಿ ಎರಡನೇ ದಿನದ ಸಮಾರಂಭವನ್ನು ಉದ್ಘಾಟಿಸಿ, ಶಿಕ್ಷಣವು ಜೀವನವನ್ನು ಸಾರ್ಥಕಗೊಳಿಸುವ ಪ್ರಮುಖ ಸಾಧನವಾಗಿದ್ದು, ಮಹಿಳಾ ಶಿಕ್ಷಣ–ಕ್ಕೆ ಅಲ್ಲಂ ಸುಮಂಗಳಮ್ಮ ಅವರು ನೀಡಿದ ಕೊಡುಗೆ ಶ್ಲಾಘನೀಯವಾಗಿದೆಂದರು. ವೀರಶೈವ ವಿದ್ಯಾವರ್ಧಕ ಸಂಘವು ಇನ್ನಷ್ಟು ಪ್ರಗತಿ ಸಾಧಿಸಲಿ ಹಾಗೂ ವಿದ್ಯಾರ್ಥಿಗಳಿಗೆ ಉತ್ತಮ ಆರೋಗ್ಯ ಮತ್ತು ಗುಣಮಟ್ಟದ ಶಿಕ್ಷಣ ದೊರೆ–ಯಲಿ ಎಂದು ಆಶಿಸಿ. ಪಿ. ಗುರುಬಸಪ್ಪ ಸಂಘದ ಶೈಕ್ಷಣಿಕ ಸೇವೆಗೆ ಗೌರವ ಸೂಚಿಸುವ ನಿಟ್ಟಿನಲ್ಲಿ 18 ಎಕರೆ ಭೂಮಿಯನ್ನು ದಾನ ಮಾಡಿರುವುದು ಸ್ಮರಣೀಯ ಎಂದರು.

ಸಂಘ ಖಜಾಂಚಿ ಬೈಲುವದ್ದಿಗೇರಿ ಯರಿಸ್ವಾಮಿ ಪ್ರಾಸ್ತಾವಿಕವಾಗಿ ಮಾತನಾಡಿ, ಸಂಘದ ಇತಿಹಾಸ, ಎ.ಎಸ್.ಎಂ. ಮಹಿಳಾ ಮಹಾವಿದ್ಯಾಲಯದ ಸ್ಥಾಪನೆ ಮತ್ತು ಬೆಳವಣಿಗೆ ಹಾಗೂ ಗುರು ವಂದನಾ ಕಾರ್ಯಕ್ರಮದ ಮಹತ್ವವನ್ನು ವಿವರಿಸಿದರು.

ಕರ್ನಾಟಕ ಸಾಹಿತ್ಯ ಅಕಾಡೆಮಿಯ ಮಾಜಿ ಸದಸ್ಯ ಡಾ. ಮೈತ್ರೇಯಿಣಿ ಗಡಿಗೆಪ್ಪಗೌಡರ್ ಮಾತನಾಡಿ, ವೀರಶೈವ ವಿದ್ಯಾವರ್ಧಕ ಸಂಘವು ಶೈಕ್ಷಣಿಕ ಕ್ಷೇತ್ರದಲ್ಲಿ ಬಳ್ಳಾರಿಯ ಇತಿಹಾಸದಲ್ಲಿ ಮಹತ್ವದ ಸ್ಥಾನ ಪಡೆದಿದೆ. ಅಲ್ಲಂ

# ಮೋದಿ 800 ರೈತರನ್ನು ಕೊಲೆ ಮಾಡಿದ್ದಾರೆ:

## ಹರಿಪ್ರಸಾದ್ ಹೇಳಿಕೆಗೆ ಆಕ್ರೋಶ

ಅಡ್ಡಿಪಡಿಸಿದ್ದನ್ನು ಖಂಡಿಸಿ ಪ್ರತಿಪಕ್ಷ ಸದಸ್ಯರು ಪ್ರತಿಭಟನೆ ನಡೆಸಿ ಸಭಾತ್ಯಾಗ ಮಾಡಿದರು.

ಬರ ಪರಿಸ್ಥಿತಿಯಿಂದ ರೈತರು ಎದುರಿಸುತ್ತಿರುವ ಸಂಕಷ್ಟ ಹಾಗೂ ಕೃಷಿ ಸಾಲ ಮನ್ನಾ ಕುರಿತು ನಡೆಯುತ್ತಿದ್ದ ಚರ್ಚೆ ಈ ಗದ್ದಲಕ್ಕೆ ಕಾರಣವಾಯಿತು. ಯುಪಿಎ ಸರ್ಕಾರದ ಅವಧಿಯಲ್ಲಿ ಕೈಗೊಂಡ ಸಾಲ ಮನ್ನಾ ಕ್ರಮಗಳು ಹಾಗೂ ಮೋದಿ ಸರ್ಕಾರ ಘೋಷಿಸಿದ ಸಾಲ ಮನ್ನಾ ಯೋಜನೆಗಳ ಕುರಿತು ವಿಧಾನ ಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಮಾತನಾಡುತ್ತಿದ್ದರು. ಈ ವೇಳೆ ಹರಿಪ್ರಸಾದ್ ಮಧ್ಯಪ್ರವೇಶಿಸಿದರು.

ಯುಪಿಎ ಸರ್ಕಾರದಲ್ಲಿ ಮನಮೋಹನ್ ಸಿಂಗ್ ನೇತೃತ್ವದ ಸರ್ಕಾರ ರೈತರ ಸಾಲ ಮನ್ನಾ ಮಾಡಿದೆ. ಆದರೆ, ಈಗ 800 ರೈತರ ಪ್ರಾಣ ತೆಗೆದುಕೊಂಡ ನರೇಂದ್ರ ಮೋದಿ, ರೈತರ ಕೊಲೆ ಮಾಡಿದ್ದಾರೆಂದು ವಾಗ್ದಾಳಿ ನಡೆಸಿದರು.

ಇದು ವಿರೋಧ ಪಕ್ಷದ ಸದಸ್ಯರ ಆಕ್ರೋಶಕ್ಕೆ ಕಾರಣವಾಗಿ, ಪ್ರಧಾನಿ ವಿರುದ್ಧ ಏಕವಚನ ಪ್ರಯೋಗ ಮಾಡಿದ್ದಾರೆ. ಬರ ಕುರಿತು ಚರ್ಚೆ ನಡೆಯದಂತೆ ಅಡ್ಡಿಪಡಿಸಿದ್ದಾರೆಂದು ಆಕ್ಷೇಪಿಸಿದರು.

ಬಿಜೆಪಿ ಸದಸ್ಯ ಸಿ.ಟಿ. ರವಿ ಹರಿಪ್ರಸಾದ್ ಹೇಳಿಕೆಯನ್ನು ಖಂಡಿಸಿದರೆ, ಹಲವು ಬಿಜೆಪಿ ಸದಸ್ಯರು ಆ ಹೇಳಿಕೆಯನ್ನು ದಾಖಲೆಯಿಂದ ತೆಗೆದುಹಾಕುವಂತೆ ಆಗ್ರಹಿಸಿದರು.

ಸಚಿವರಾದ ಯತೀಂದ್ರ ಸಿದ್ದರಾಮಯ್ಯ, ವಿಜಯಾನಂದ ಕಾಶಪ್ಪನವರ್ ಮತ್ತು ಅಜಯ್ ಸಿಂಗ್ ಅವರು ಹರಿಪ್ರಸಾದ್ ಅವರ ಹೇಳಿಕೆಯನ್ನು ಸಮರ್ಥಿಸಿಕೊಂಡರು.

ಸಭಾಪತಿ ಸಲಿಂ ಅಹ್ಮದ್ ಅವರು ಎದ್ದು ನಿಂತು ಗದ್ದಲವನ್ನು ನಿಯಂತ್ರಿಸಲು ಪ್ರಯತ್ನಿಸಿದರು. ಹೇಳಿಕೆಗಳನ್ನು ದಾಖಲೆಯಿಂದ ತೆಗೆದುಹಾಕುವಂತೆ ಬಂದಿರುವ ಬೇಡಿಕೆಯನ್ನು ಪರಿಶೀಲಿಸಲಾಗುವುದು ಎಂದು ತಿಳಿಸಿದರು.

ಅಸಭ್ಯ ಅಥವಾ ಅಸಂಸದೀಯ ಪದಗಳಿದ್ದರೆ ಅವುಗಳನ್ನು ಕಲಾಪದ ದಾಖಲೆಯಿಂದ ತೆಗೆದುಹಾಕಲಾಗುವುದು ಎಂದು ಭರವಸೆ ನೀಡಿ–ದರು. ಸದನದ ಘನತೆಯನ್ನು ಕಾಪಾಡಿಕೊಂಡು ಸದಸ್ಯರು ನಡೆದುಕೊಳ್ಳಬೇಕೆಂದು ಮನವಿ ಮಾಡಿದರು.

ಈ ವೇಳೆ ಬಿಜೆಪಿ ಸದಸ್ಯ ಕೇಶವ ಪ್ರಸಾದ್ ಅವರು, ಸಭಾಪತಿಯ "ಮೀನು ಮಾರುಕಟ್ಟೆಯಂತಾಗಿದೆ" ಎಂಬ ಅಭಿಪ್ರಾಯಕ್ಕೆ ಆಕ್ಷೇಪ ವ್ಯಕ್ತಪಡಿಸಿದರು.

ಆಡಳಿತ ಪಕ್ಷದ ಸದಸ್ಯರು ಯಾವುದೇ ಹೇಳಿಕೆ ನೀಡಬಹುದು, ಆದರೆ, ಪ್ರತಿಪಕ್ಷ ಮಾತ್ರ ಮೌನವಾಗಿರಬೇಕು ಎಂದು ನಿರೀಕ್ಷಿಸುವುದು ಸರಿಯಲ್ಲ ಎಂದು ವಾದಿಸಿದರು.

**ಪ್ರಿಯ ಓದುಗರೆ ನಿಮ್ಮ ಪ್ರೀತಿಯ ಅನಂತ ಜನಶಕ್ತಿ ಕನ್ನಡ ದಿನ ಪತ್ರಿಕೆಯನ್ನು ತಪ್ಪದೇ ಓದಿ ಪ್ರೋತ್ಸಾಹಿಸಿ**

# ಕೆಎಸ್‌ಓಯುನಲ್ಲಿ ಏಕಕಾಲಕ್ಕೆ ಎರಡು ಪದವಿ ಪಡೆಯಲು ಅವಕಾಶ: ಜ್ಞಾನಪ್ರಕಾಶ್

## ಸೆ. 30ರವರೆಗೆ ದೂರಶಿಕ್ಷಣ ಪದವಿ, ಸ್ನಾತಕೋತ್ತರ ಕೋರ್ಸ್‌ಗಳಿಗೆ ಪ್ರವೇಶ




ಬಳ್ಳಾರಿ : ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದಲ್ಲಿ ಪದವಿ ಹಾಗೂ ಸ್ನಾತಕೋತ್ತರ ಪದವಿ ದೂರಶಿಕ್ಷಣ ತರಗತಿಗಳಿಗೆ ಸೆಪ್ಟೆಂಬರ್ 30ರವರೆಗೆ ಪ್ರವೇಶ ಪಡೆಯಲು ಅವಕಾಶವಿದೆ ಎಂದು ವಿಶ್ವವಿದ್ಯಾಲಯದ ಕುಲಪತಿ ಜ್ಞಾನಪ್ರಕಾಶ್ ತಿಳಿಸಿದ್ದಾರೆ.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ರಾಜ್ಯದಲ್ಲಿ ದೂರಶಿಕ್ಷಣ ನೀಡುವ ಏಕೈಕ ವಿಶ್ವವಿದ್ಯಾಲಯವಾಗಿರುವ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದಲ್ಲಿ ಉದ್ಯೋಗಸ್ಥರು, ಕಾಲೇಜುಗಳಿಗೆ ನಿಯಮಿತವಾಗಿ ಹಾಜರಾಗಲು ಸಾಧ್ಯವಾಗದವರು ಹಾಗೂ ಮಹಿಳೆಯರು ಸೇರಿದಂತೆ ಎಲ್ಲರೂ ಬಿಕಾಂ, ಬಿಎ ಸೇರಿದಂತೆ ವಿವಿಧ ಪದವಿ ಮತ್ತು ಸ್ನಾತಕೋತ್ತರ ಪದವಿಗಳನ್ನು ಪಡೆಯಬಹುದಾಗಿದೆ ಎಂದರು.

ವಿಶ್ವವಿದ್ಯಾಲಯವು 'ಎಲ್ಲರಿಗೂ ಉನ್ನತ ಶಿಕ್ಷಣ' ಎಂಬ ಧ್ಯೇಯದೊಂದಿಗೆ ರಾಜ್ಯದಲ್ಲಿ ಸುಮಾರು 38 ಪ್ರಾದೇಶಿಕ ಕೇಂದ್ರಗಳನ್ನು ಹೊಂದಿದ್ದು, 75 ಪರೀಕ್ಷಾ ಕೇಂದ್ರಗಳಿವೆ. ಆನ್‌ಲೈನ್ ಮೂಲಕ ರಾಜ್ಯದ ಯಾವುದೇ ಭಾಗದಿಂದ ಪ್ರವೇಶ ಪಡೆದು ಪದವಿ ಹಾಗೂ ಸ್ನಾತಕೋತ್ತರ ಪದವಿಗಳನ್ನು ಪಡೆಯಲು ಅವಕಾಶವಿದೆ. ಆನ್‌ಲೈನ್ ತರಗತಿಗಳನ್ನೂ ಆರಂಭಿಸಲಾಗಿದ್ದು, ವಿಶ್ವವಿದ್ಯಾಲಯದ ಪ್ರತ್ಯೇಕ ಯೂಟ್ಯೂಬ್ ಚಾನೆಲ್ ಮೂಲಕ ಪಠ್ಯಕ್ರಮದ ತರಗತಿಗಳನ್ನು ವೀಕ್ಷಿಸಿ ಪರೀಕ್ಷಾ ತಯಾರಿ ನಡೆಸಬಹುದಾಗಿದೆ ಎಂದು ತಿಳಿಸಿದರು.

ವಿಶ್ವವಿದ್ಯಾಲಯದಲ್ಲಿ ನೀಡಲಾಗುತ್ತಿರುವ ಪದವಿಗಳು ರಾಜ್ಯದ ಇತರೆ ನಿಯಮಿತ ಕಾಲೇಜುಗಳ ಪದವಿಗಳಿಗೆ ಸಮಾನವಾಗಿದ್ದು, ಖಾಸಗಿ ಹಾಗೂ ಸರ್ಕಾರಿ ಉದ್ಯೋಗಗಳಿಗೆ ಅರ್ಹವಾಗಿವೆ. ಇಲ್ಲಿ ವ್ಯಾಸಂಗ ಮಾಡಿದ ಹಲವು ವಿದ್ಯಾರ್ಥಿಗಳು ಕೆಎಎಸ್ ಮತ್ತು ಐಎಎಸ್ ಸೇರಿದಂತೆ ವಿವಿಧ ಉನ್ನತ ಹುದ್ದೆಗಳನ್ನು ಪಡೆದಿದ್ದಾರೆ ಎಂದು ಹೇಳಿದರು.

ಪ್ರಸ್ತುತ ವಿಶ್ವವಿದ್ಯಾಲಯದಲ್ಲಿ ರಾಜ್ಯ ಹಾಗೂ ಹೊರರಾಜ್ಯಗಳಿಂದ ಸುಮಾರು 12,800 ವಿದ್ಯಾರ್ಥಿಗಳು ಪ್ರವೇಶ ಪಡೆದಿದ್ದಾರೆ. ದೂರಶಿಕ್ಷಣ ನೀಡುವಲ್ಲಿ ಕೆಎಸ್‌ಓಯು ದೇಶದಲ್ಲೇ ಎರಡನೇ ಸ್ಥಾನದಲ್ಲಿದ್ದು, ಬಳ್ಳಾರಿ ಕೇಂದ್ರವನ್ನು ಉತ್ತರ ಕರ್ನಾಟಕದ ನೋಡಲ್ ಕೇಂದ್ರವಾಗಿ ಅಭಿವೃದ್ಧಿಪಡಿಸಲಾಗುವುದು ಎಂದು ಜ್ಞಾನಪ್ರಕಾಶ್ ತಿಳಿಸಿದರು.

ಬಳ್ಳಾರಿಯ ನಲ್ಲಚರವು ಪ್ರದೇಶದಲ್ಲಿರುವ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಕೇಂದ್ರಕ್ಕೆ ಉತ್ತಮ ಸೌಲಭ್ಯಗಳಿರುವ ಕಟ್ಟಡವಿದೆ. ಆದರೆ ಕೇಂದ್ರಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯನ್ನು ಕೆಲವೊಮ್ಮೆ ಯುಜಿಡಿ ಕಾಮಗಾರಿಗಳಿಗಾಗಿ ಬಂದ್ ಮಾಡಲಾಗುತ್ತಿರುವುದರಿಂದ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ. ಜಿಲ್ಲಾಧಿಕಾರಿಗಳು ಈ ಸಮಸ್ಯೆಯನ್ನು ಪರಿಶೀಲಿಸಿ ವಿಶ್ವವಿದ್ಯಾಲಯದ ಕೇಂದ್ರಕ್ಕೆ ಸುಗಮ ಸಂಚಾರ–ಕ್ಕೆ ಅನುಕೂಲವಾಗುವಂತೆ ರಸ್ತೆ ಸಮಸ್ಯೆಯನ್ನು ಪರಿಹರಿಸಬೇಕು ಎಂದು ಕುಲಪತಿ ಜ್ಞಾನಪ್ರಕಾಶ್ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ಡಾ. ಎನ್. ಆನಂದಗೌಡ, ಅರುಣ್, ಸುರೇಶ್ ಮೈತ್ರಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಪ್ರತಾಪ್ ಸಿಂಹ ಅವರನ್ನು ರಾಜ್ಯದಿಂದ ಗಡಿಪಾರು ಮಾಡಲು ಆಗ್ರಹ

## ಕೋಮು ಸಾಮರಸ್ಯ ಕದಡುವವರ ವಿರುದ್ಧ ಕಾನೂನು ಕ್ರಮಕ್ಕೆ ಡಿಎಸ್‌ಎಸ್ ಒತ್ತಾಯ



ಬಳ್ಳಾರಿ : ಮೈಸೂರು ಜಿಲ್ಲೆಯ ಟಿ. ನರಸೀಪುರದಲ್ಲಿ ಗಣೇಶೋತ್ಸವಕ್ಕೆ ಸಂಬಂಧಿಸಿದಂತೆ ನಡೆದ ಘಟನೆಗಳ ಹಿನ್ನೆಲೆಯಲ್ಲಿ ಕೋಮು ಸಾಮರಸ್ಯ ಕದಡುವ ಪ್ರಯತ್ನ ಮಾಡಲಾಗಿದೆ ಎಂದು ಆರೋಪಿಸಿ, ಅಂತಹವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ದಲಿತ ಸಂಘರ್ಷ ಸಮಿತಿ (ಡಿಎಸ್‌ಎಸ್) ಭೀಮಮಾರ್ಗದ ಮುಖಂಡ ಬಂಡಿಹಟ್ಟಿ ಗಾದಿಲಿಂಗ ಒತ್ತಾಯಿಸಿದ್ದಾರೆ.

ಈ ಕುರಿತು ಬಳ್ಳಾರಿ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದ ಅವರು, ಟಿ. ನರಸೀಪುರ ಸೇರಿದಂತೆ ವಿವಿಧೆಡೆ ಶಾಂತಿ ಮತ್ತು ಸೌಹಾರ್ದತೆ ಕಾಪಾಡುವಂತೆ ಒತ್ತಾಯಿಸಿ ಡಿಎಸ್‌ಎಸ್ ಹಾಗೂ ವಿವಿಧ ದಲಿತ ಸಂಘಟನೆಗಳು ಶಾಂತಿಯುತ ಹೋರಾಟ ನಡೆಸಿವೆ ಎಂದು ತಿಳಿಸಿದರು.

ಮಾಜಿ ಸಂಸದ ಪ್ರತಾಪ್ ಸಿಂಹ ಅವರು ಗಣೇಶೋತ್ಸವದ ಸಂದರ್ಭದಲ್ಲಿ ನೀಡಿದ ಹೇಳಿಕೆಗಳು ಹಾಗೂ ನಂತರದ ಬೆಳವಣಿಗೆಗಳ ಕುರಿತು ಗಾದಿಲಿಂಗ ಆಕ್ಷೇಪ ವ್ಯಕ್ತಪಡಿಸಿದರು. ಈ ಹೇಳಿಕೆಗಳು ಸಮಾಜದಲ್ಲಿ ಅಶಾಂತಿ ಉಂಟುಮಾಡುವ ಸಾಧ್ಯತೆ ಇದೆ ಎಂದು ಆರೋಪಿಸಿ, ಕಾನೂನುಬದ್ಧ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಪ್ರತಾಪ್ ಸಿಂಹ ವಿರುದ್ಧ ಈಗಾಗಲೇ ಪ್ರಕರಣ ದಾಖಲಾಗಿರುವುದು ಸ್ವಾಗತಾರ್ಹವಾಗಿದ್ದು, ತನಿಖೆ ನಡೆಸಿ ಕಾನೂನು ಪ್ರಕಾರ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು. ಪ್ರತಾಪ್ ಸಿಂಹ ವಿರುದ್ಧ ಟಿ. ನರಸೀಪುರ ಪೊಲೀಸ್ ಠಾಣೆಯಲ್ಲಿ ಸೆ.23ರಂದು ಮತ್ತೊಂದು ಎಫ್‌ಐಆರ್ ದಾಖಲಾಗಿರುವುದಾಗಿ ವರದಿಯಾಗಿದೆ; ಪ್ರಕರಣದಲ್ಲಿ ಜಾತಿ ನಿಂದನೆ ಸೇರಿದಂತೆ ಭಾರತೀಯ ನ್ಯಾಯ ಸಂಹಿತೆ ಮತ್ತು ಎಸ್‌ಸಿ/ಎಸ್‌ಟಿ ಕಾಯ್ದೆಯಡಿ ಆರೋಪಗಳನ್ನು ದಾಖಲಿಸಲಾಗಿದೆ.

ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಹಾಗೂ ವಿವಿಧ ಸಮುದಾಯಗಳ ನಡುವೆ ಉತ್ತಮ ಬಾಂಧವ್ಯ ಉಳಿಯಬೇಕು. ಸಂವಿಧಾನದ ಆಶಯಗಳಿಗೆ ವಿರುದ್ಧವಾಗಿ ಸಮಾಜದಲ್ಲಿ ದ್ವೇಷದ ವಾತಾವರಣ ಸೃಷ್ಟಿಸುವ ಯಾವುದೇ ಪ್ರಯತ್ನವನ್ನು ತಡೆಯಬೇಕು ಎಂದು ಅವರು ಮನವಿಯಲ್ಲಿ ಒತ್ತಾಯಿಸಿದರು.

ಪ್ರತಾಪ್ ಸಿಂಹ ಅವರು ತಮ್ಮ ವಿರುದ್ಧ ದಾಖಲಾಗಿರುವ ಪ್ರಕರಣಗಳನ್ನು ಕಾನೂನುಬದ್ಧವಾಗಿ ಎದುರಿಸುವುದಾಗಿ ಹೇಳಿದ್ದು, ಪ್ರಕರಣಗಳು ರಾಜಕೀಯ ಪ್ರೇರಿತವಾಗಿವೆ ಎಂದು ಆರೋಪಿಸಿದ್ದಾರೆ.

# ಎಸ್‌ಐಆರ್‌ಗೆ ಇನ್ನೂ ಆರು ತಿಂಗಳು ಕಾಲಾವಕಾಶ ನೀಡಿ: ಕರೂರ್ ಮಾಧವ ರೆಡ್ಡಿ

## ಮತದಾರರ ಹೆಸರು ಮರುಸೇರ್ಪಡೆಗೆ ಹೆಚ್ಚಿನ ಅವಕಾಶ ಕಲ್ಪಿಸಲು ಆಗ್ರಹ




ಬಳ್ಳಾರಿ : ಮತದಾರರ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಗೆ ಇನ್ನೂ ಆರು ತಿಂಗಳ ಕಾಲಾವಕಾಶ ನೀಡಬೇಕು ಎಂದು ಕರ್ನಾಟಕ ರೈತ ಸಂಘ ಹಾಗೂ ಹಸಿರು ಸೇನೆಯ ಜಿಲ್ಲಾಧ್ಯಕ್ಷ ಕರೂರ್ ಮಾಧವ ರೆಡ್ಡಿ ರಾಜ್ಯ ಚುನಾವಣಾ ಆಯೋಗವನ್ನು ಒತ್ತಾಯಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಎದ್ದೇಳು ಕರ್ನಾಟಕದ ಮುಖಂಡ ಹಾಗೂ ವಕೀಲ ಸಿದ್ದಣ್ಣ, ಎಸ್‌ಐಆರ್ ಪ್ರಕ್ರಿಯೆಯಿಂದ ಹಲವು ವರ್ಷಗಳಿಂದ ಮತದಾನ ಮಾಡುತ್ತಿದ್ದವರ ಹೆಸರುಗಳೂ ಮತದಾರರ ಪಟ್ಟಿಯಿಂದ ಹೊರಗುಳಿದಿರುವ ಬಗ್ಗೆ ಆತಂಕ ವ್ಯಕ್ತಪಡಿಸಿದರು. ಅಂತಹ ಮತದಾರರು ಮತ್ತೆ ಹೆಸರು ಸೇರ್ಪಡೆಗೆ ನಮೂನೆ–6 ಸಲ್ಲಿಸುವಂತೆ ಸೂಚಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಮತದಾರರಿಗೆ ಅಗತ್ಯ ಮಾಹಿತಿ ಹಾಗೂ ನೆರವು ನೀಡುವ ಉದ್ದೇಶದಿಂದ ಸೆ.22ರಿಂದ 30ರವರೆಗೆ ರಾಜ್ಯಾದ್ಯಂತ ಜಾಗೃತಿ ಪ್ರವಾಸ ಹಮ್ಮಿಕೊಳ್ಳಲಾಗಿದೆ ಎಂದರು.

ಸೆ.30ರಂದು ರಾಜ್ಯ ಸರ್ಕಾರ ಹಾಗೂ ರಾಜ್ಯ ಚುನಾವಣಾ ಆಯೋಗಕ್ಕೆ ಮನವಿ ಸಲ್ಲಿಸಿ, ಮತದಾರರ ಪಟ್ಟಿಯಿಂದ ಹೊರಗುಳಿದವರಿಗೆ ಪರ್ಯಾಯ ವ್ಯವಸ್ಥೆ ಕಲ್ಪಿಸುವಂತೆ ಒತ್ತಾಯಿಸಲಾಗುವುದು ಎಂದು ತಿಳಿಸಿದರು. ಸೆ.24ರಂದು ಸಂಜೆ 5 ಗಂಟೆಗೆ ನಗರದ ಪೋಲಾ ಹೋಟೆಲ್ ಡೈಮಂಡ್ ಸಭಾಂಗಣದಲ್ಲಿ ವಿಶೇಷ ಸಭೆ ಆಯೋಜಿಸಲಾಗಿದ್ದು, ನಟ ಪ್ರಕಾಶ್ ರಾಜ್ ಸೇರಿದಂತೆ ಮತದಾರರ ಕಾವಲು ಸಮಿತಿಯ ಹಲವು ಮುಖಂಡರು ಭಾಗವಹಿಸಲಿದ್ದಾರೆ ಎಂದರು.

ಮತದಾರರ ವಿಶೇಷ ಪರಿಷ್ಕರಣೆ ಪ್ರಕ್ರಿಯೆಯನ್ನು ತರಾತುರಿಯಲ್ಲಿ ಪೂರ್ಣಗೊಳಿಸದೆ, ಹೆಸರು ಮರುಸೇರ್ಪಡೆ ಹಾಗೂ ತಿದ್ದುಪಡಿಗೆ ಇನ್ನಷ್ಟು ಕಾಲಾವಕಾಶ ನೀಡಬೇಕು ಎಂದು ಕರೂರ್ ಮಾಧವ ರೆಡ್ಡಿ ಆಗ್ರಹಿಸಿದರು. ಚುನಾವಣಾ ಆಯೋಗದ ಪ್ರಕ್ರಿಯೆಯಿಂದ ಉಂಟಾಗಿರುವ ಗೊಂದಲಗಳನ್ನು ಸರಿಪಡಿಸಲು ಹೆಚ್ಚುವರಿ ಸಮಯ ನೀಡಬೇಕು ಎಂದು ಒತ್ತಾಯಿಸಿದರು.

ಕರ್ನಾಟಕದಲ್ಲಿ ಎಸ್‌ಐಆರ್ ಪ್ರಕ್ರಿಯೆಯಡಿ ಹಕ್ಕು ಮತ್ತು ಆಕ್ಷೇಪಣೆಗಳ ಅವಧಿ ಹಾಗೂ ನೋಟಿಸ್‌ಗಳ ವಿಚಾರಣೆ ಪ್ರಕ್ರಿಯೆ ಮುಂದುವರಿದಿದ್ದು, ಸೆ.23ರ ಗಡುವಿನ ನಂತರವೂ ಕೆಲವು ನೋಟಿಸ್‌ಗಳಿಗೆ ಅ.12ರವರೆಗೆ ಅವಕಾಶ ಮತ್ತು ವಿಚಾರಣೆ ಅ.22ರವರೆಗೆ ಮುಂದುವರಿಯಲಿದೆ ಎಂದು ವರದಿಯಾಗಿದೆ.

ಸುದ್ದಿಗೋಷ್ಠಿಯಲ್ಲಿ ಮಾಜಿ ಮಹಾನಗರ ಪಾಲಿಕೆ ಸದಸ್ಯೆ ಪರ್ವೀನ್ ಬಾನು, ಅಮ್ಜದ್, ಬಂಡಿಹಟ್ಟಿ ಗಾದಿಲಿಂಗ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಪೌರಕಾರ್ಮಿಕರ ಕಲ್ಯಾಣಕ್ಕೆ ಅಧಿಕಾರಿಗಳು ಸ್ಪಂದನಾಶೀಲರಾಗಿ ಕಾರ್ಯನಿರ್ವಹಿಸಿ; ಡಿಸಿ

1ನೇ ಪುಟದಿಂದ..

ತೊಡಗಿಸಿಕೊಂಡು ಸಾರ್ವಜನಿಕ ಆರೋಗ್ಯ ಮತ್ತು ನೈರ್ಮಲ್ಯ ಕಾಪಾಡಲು ಶ್ರಮಿಸುತ್ತಿದ್ದಾರೆ. ಅವರ ಕೆಲಸಕ್ಕೆ ಗೌರವ ನೀಡುವುದರ ಜೊತೆಗೆ, ಕೆಲಸದ ಸಂದರ್ಭದಲ್ಲಿ ಎದುರಾಗುವ ಸಮಸ್ಯೆಗಳನ್ನು ಆಲಿಸಿ ಸೂಕ್ತ ಪರಿಹಾರ ಕಲ್ಪಿಸಬೇಕು ಎಂದು ಹೇಳಿದರು.

ಪೌರಕಾರ್ಮಿಕರ ದಿನಾಚರಣೆ ಸಂದರ್ಭದಲ್ಲಿ ಅವರ ಸೇವೆಯನ್ನು ಸ್ಮರಿಸಿ, ವಿವಿಧ ಕಾರ್ಯಕ್ರಮಗಳ ಮೂಲಕ ಗೌರವ ಸಲ್ಲಿಸಲಾಯಿತು. ಪೌರಕಾರ್ಮಿಕರ ಕುಟುಂಬಗಳ ಸಮಸ್ಯೆಗಳಿಗೂ ಆದ್ಯತೆ ನೀಡಿ ಅಗತ್ಯ ಸೌಲಭ್ಯಗಳನ್ನು ಒದಗಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಯಿತು.ನಗರದ ಸ್ವಚ್ಛತೆ ಕಾಪಾಡುವಲ್ಲಿ ಪೌರಕಾರ್ಮಿಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಹೀಗಾಗಿ ಸಾರ್ವಜನಿಕರೂ ಪೌರಕಾರ್ಮಿಕರೊಂದಿಗೆ ಸಹಕರಿಸಿ ಹಸಿ ಮತ್ತು ಒಣ ಕಸವನ್ನು ಪ್ರತ್ಯೇಕವಾಗಿ ವಿಲೇವಾರಿ ಮಾಡುವ ಮೂಲಕ ಸ್ವಚ್ಛತಾ ಕಾರ್ಯಕ್ಕೆ ಕೈಜೋಡಿಸಬೇಕು ಎಂದು ಮನವಿ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾಡಳಿತದ ಅಧಿಕಾರಿಗಳು,

# ಇನ್ನಾರೆಡ್ಡಿ ಕಾಲೋನಿಯ ಮನೆಯಲ್ಲಿ 20 ಲಕ್ಷ ಮೌಲ್ಯದ ಚಿನ್ನಾಭರಣ ಕಳವು



ಬಳ್ಳಾರಿ : : ನಗರದ ಇನ್ನಾರೆಡ್ಡಿ ಕಾಲೋನಿಯಲ್ಲಿನ ಗುತ್ತುಗೆದಾರ ಶ್ರೀಧರ್ ಅವರ ಮನೆಯಲ್ಲಿ ಮೊನ್ನೆ ರಾತ್ರಿ ಮೂವರು ಕಳ್ಳರು ನುಗ್ಗಿ 20 ಲಕ್ಷ ಮೌಲ್ಯದ ಚಿನ್ನಾಭರಣ ದೋಚಿಕೊಂಡು ಹೋಗಿರುವ ಘಟನೆ ನಡೆದಿದ್ದು.ಕೌಲ್ ಬಜಾರ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕಳ್ಳತನಕ್ಕೆ ಬಂದ ತಂಡದ ಚಲನವಲನ ಸಿಸಿಟಿವಿಯಲ್ಲಿ ಸೆರೆ-ಯಾಗಿದೆ.ಕಿಟಿಕಿ ಸರಳು ತುಂಡರಿಸಿ ಮನೆ ಹೊಕ್ಕಿರುವ ಕಳ್ಳರು.ಕುಟುಂಬಸ್ಥರು ನಿದ್ರಿಸುತ್ತಿದ್ದ ಕೊಠಡಿ ಹೊರತುಪಡಿಸಿ ಇಡೀ ಮನೆ ಜಾಲಾಡಿದ್ದಾರೆ. 211 ಗ್ರಾಂ ಚಿನ್ನ ಹಾಗೂ 1,200 ಗ್ರಾಂ ಬೆಳ್ಳಿ ಆಭರಣ ಕದ್ದೊಯ್ದಿದ್ದಾರೆ.

ಕಳ್ಳರು ಕ್ಲೋರೋಫಾರ್ಮ್ ಮಾದರಿಯ ರಾಸಾಯನಿಕ ಬಳಸಿ ಮಲಗಿದ್ದವರನ್ನು ಮಂಪರು ಮಾಡಿದ್ದಾರೆ ಎನ್ನಲಾಗ್ತಿದೆ.

ಘಟನಾ ಸ್ಥಳಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸುಮಾನ್ ಪೆನ್ನೇಕರ್ ಭೇಟಿ ಪರಿಶೀಲನೆ ಮಾಡಿ ಕಳ್ಳರ ಪತ್ತೆ ಯತ್ನ ನಡೆಸಿದ್ದಾರಂತೆ

# ಸಕ್ಕರೆ ಕರಡೀಶ ಸಹಕಾರ ಸಂಘಕ್ಕೆ 189.40 ಲಕ್ಷ ಲಾಭ ಷೇರುದಾರರಿಗೆ ಶೇ.14.25ರಷ್ಟು ಲಾಭಾಂಶ ಘೋಷಣೆ



ಬಳ್ಳಾರಿ : ನಗರದ ಬಸವ ಭವನದಲ್ಲಿ ಶ್ರೀ ಶರಣ ಸಕ್ಕರೆ ಕರಡೀಶ ಸೌಹಾರ್ದ ಪತ್ತಿನ ಸಹಕಾರಿ ಸಂಘದ 10ನೇ ವಾರ್ಷಿಕ ಮಹಾಸಭೆ ನಡೆಯಿತು.

ಸಂಘದ ಅಧ್ಯಕ್ಷ ಕಲ್ಲುಗಿಡಿ ಮಂಜುನಾಥ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, 2025–26ನೇ ಸಾಲಿನಲ್ಲಿ ಸಂಘವು 189.40 ಲಕ್ಷ ಲಾಭ ಗಳಿಸಿದ್ದು, ಷೇರುದಾರರಿಗೆ ಶೇ.14.25ರಷ್ಟು ಲಾಭಾಂಶ ನೀಡಲಾಗುತ್ತಿದೆ ಎಂದು ತಿಳಿಸಿದರು.

ಸಂಘವು 568.28 ಲಕ್ಷ ಷೇರು ಬಂಡವಾಳ, 5,323.90 ಲಕ್ಷ ಠೇವಣಿ ಹಾಗೂ 4,625.34 ಲಕ್ಷ ಸಾಲ ಮತ್ತು ಮುಂಗಡಗಳನ್ನು ಹೊಂದಿದೆ ಎಂದು ಕಲ್ಲುಗಿಡಿ ಮಂಜುನಾಥ ಮಾಹಿತಿ ನೀಡಿದರು.

ಸಭೆಯಲ್ಲಿ ಸಂಘದ ಉಪಾಧ್ಯಕ್ಷ ಟೆಂಗಿನಕಾಯಿ ಮಹಾಂತೇಶ್, ನಿರ್ದೇಶಕರಾದ ಹಾವಿನಾಳ ಬಸವರಾಜ್, ಕೇಣಿ ಬಸಪ್ಪ, ಬೈಲುವದ್ದಿಗೇರಿ ಎರ್ರಿಸ್ವಾಮಿ, ಜಿ. ವೀರೇಶಪ್ಪ, ಹೋತೂರು ಹೇಮಾದ್ರಿ, ಬಾಡದ ಪ್ರಕಾಶ್, ಕೆ.ಎಂ. ಚನ್ನರಾಮೇಶ್ವರ, ಶಿವರಮೇಶ್, ವಂಟೆನಾಗರಾಜ್, ಕಾರ್ಯನಿರತ ನಿರ್ದೇಶಕರಾದ ಗಾಳಿ ರಾಜಶೇಖರ, ಮುಂಡವಾಡ ರಮೇಶ್ ಹಾಗೂ ನಾಮನಿರ್ದೇಶಕರಾದ ಜಾನೆಕುಂಟೆ ತಿಪ್ಪೇರುದ್ರಪ್ಪ, ಶಿಡಗಿನಮೊಳೆ ಬಸವರಾಜ್ ಭಾಗವಹಿಸಿದ್ದರು.

ಸಿಇಒ ವೈ. ಶಂಭುಲಿಂಗಪ್ಪ ವರದಿ ಮಂಡಿಸಿದರು. ಸೌಹಾರ್ದ ಸಂಯುಕ್ತ ಸಹಕಾರಿಯ ಜಿಲ್ಲಾ ಸಂಯೋಜಕ ವೀರೇಶೆಟ್ಟಿ ಅವರು ಸೌಹಾರ್ದ ಸಹಕಾರ ಸಂಘಗಳ ಕುರಿತು ಉಪನ್ಯಾಸ ನೀಡಿದರು.

ಕರಡಕಲ್ ವೀರೇಶ್ ಕಾರ್ಯಕ್ರಮ ನಿರೂಪಿಸಿದರು. ಪವಿತ್ರ ಪ್ರಾರ್ಥನೆ ನೆರವೇರಿಸಿದರು.

# ಬೆಸ್ಟ್ ಅಗ್ರೋಲೈಫ್ ನ ಹೊಸ ಉತ್ಪನ್ನಗಳ ಬಿಡುಗಡೆ

ಬಳ್ಳಾರಿ : ಬೆಸ್ಟ್ ಅಗ್ರೋಲೈಫ್ ಲಿಮಿಟೆಡ್ ನಿಂದ ನಗರದ ಖಾಸಗಿ ಹೊಟೇಲ್ ನಲ್ಲಿ ಕ್ಯುಬ್ಯಾಕ್ಸ್ ಪವರ್ ಎಕ್ಸ್, ಮಿಡ್ ಕೋಟಿನ್ ಮತ್ತು ಪ್ಲೂರುಝಂ ಸೆಕ್ಟರ್ ಎಂಬ ನೂತನ ಉತ್ಪನ್ನಗಳ ಬಿಡುಗಡೆ ಮಾಡಲಾಯ್ತು ಕಂಪನಿಯ ಉಪಾಧ್ಯಕ್ಷ ಸತೀಶ್ ಮಲ್ಹೋತ್ರಾ, ದಕ್ಷಿಣದ ವ್ಯಾಪಾರದ ಮುಖ್ಯಸ್ಥ ಬಿ.ಜಿ. ಸಿದ್ದಪ್ಪ ರೆಡ್ಡಿ,ಮಾರುಕಟ್ಟೆಯ ಮುಖ್ಯಸ್ಥ ಹರ್ಷವರ್ಧನ್ ರೆಡ್ಡಿ –ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಡೀಲರ್ಗಳು, ರೈತರು ಹಾಗೂ ಕಂಪನಿಯ ಸಿಬ್ಬಂದಿ ಭಾಗವಹಿಸಿದ್ದರು. ನೂತನ ಉತ್ಪನ್ನಗಳ ವೈಶಿಷ್ಟ್ಯಗಳು, ಬಳಕೆ ಹಾಗೂ ರೈತರಿಗೆ ಅವುಗಳಿಂದ ದೊರೆಯುವ ಪ್ರಯೋಜನಗಳ ಕುರಿತು ಮಾಹಿತಿ ನೀಡಲಾಯಿತು.

ಸತೀಶ್ ಮಲ್ಹೋತ್ರಾ ಸರ್ ಪ್ರಸ್ತುತ ಹಂಗಾಮಿ ಪರಿಸ್ಥಿತಿಗಳು ಹಾಗೂ ಕೃಷಿ ಸಮುದಾಯದ ಅಭಿವೃದ್ಧಿಯಲ್ಲಿ ಕಂಪನಿಯ ಪಾತ್ರ ಕುರಿತು ಸಂವಾದ ನಡೆಸಿದರು. ಸಿದ್ದಪ್ಪ ರೆಡ್ಡಿ ಕಂಪನಿಯ ದೃಷ್ಟಿಕೋನ, ಯೋಜನೆಗಳು, ಮುಂಬರುವ ಹೊಸ ಉತ್ಪನ್ನಗಳ ಕುರಿತು ವಿವರಿಸಿದರು.

ಹರ್ಷವರ್ಧನ್ ರೆಡ್ಡಿ ಇತ್ತೀಚೆಗೆ ಬಿಡುಗ–ಡೆಯಾದ ಹೊಸ ಉತ್ಪನ್ನಗಳ ಕುರಿತು ತಾಂತ್ರಿಕ ಮಾಹಿತಿ ನೀಡಿದರು. ಉತ್ಪನ್ನಗಳ ರಾಸಾಯನಿಕ ಸಂಯೋಜನೆ ಕೀಟಗಳ ವಿರುದ್ಧ ಅವುಗಳ ಕಾರ್ಯವಿಧಾನ ಹಾಗೂ ಉತ್ಪನ್ನಗಳ ಪರಿಣಾಮಕಾರಿತ್ವದ ಕುರಿತು ತಿಳಿಸಿದರು.

ಬಳ್ಳಾರಿ, ರಾಯಚೂರು, ಗಂಗಾವತಿ, ಸಿರುಗುಪ್ಪ ಮತ್ತು ಸಿಂಧನೂರು ಪ್ರದೇಶಗಳ ಡೀಲರ್ಗಳು ಉತ್ತರ ಕರ್ನಾಟಕ ವಲಯದ ಉಸ್ತುವಾರಿ ಜಿ. ರವೀಂದ್ರ ಬಾಬು, ದಕ್ಷಿಣ ವಲಯದ ಉಸ್ತುವಾರಿ ಚೇತನ್ ಕುಮಾರ್, ದೇವೇಂದ್ರ ಹೂಗಾರ, ಕೆ. ರವಿ ತೇಜ ಅವರು ಭಾಗವಹಿಸಿದ್ದರು.

# ದೇವೇಗೌಡರನ್ನು ಭೇಟಿ ಮಾಡಿದ ಪ್ರತಾಪ್ ರೆಡ್ಡಿ

ದೇವೇಗೌಡರ ಆರೋಗ್ಯದ ಕುರಿತು ಮಾಹಿತಿ ಪಡೆದು, ಅವರೊಂದಿಗೆ ಕೆಲಕಾಲ ಮಾತುಕತೆ ನಡೆಸಿದರು. ನಾಡಾ ಪ್ರತಾಪ್ ರೆಡ್ಡಿ ಹಾಗೂ ಅವರ ಕುಟುಂಬದವರು ದೇವೇಗೌಡರನ್ನು ಆತ್ಮೀಯವಾಗಿ ಭೇಟಿ ಮಾಡಿದರು.

ರಾಜಕೀಯ ಹಾಗೂ ವಿವಿಧ ವಿಚಾರಗಳ ಕುರಿತು ಪರಸ್ಪರ ಮಾತುಕತೆ ನಡೆಸಿದ ಅವರು, ದೇವೇಗೌಡರ ಆರೋಗ್ಯ ಮತ್ತು ಮುಂದಿನ ದಿನಗಳ ಬಗ್ಗೆ ಶುಭ ಹಾರೈಸಿದರು. ಭೇಟಿಯ ಸಂದರ್ಭದಲ್ಲಿ ಕುಟುಂಬದ ಸದಸ್ಯರು ಉಪಸ್ಥಿತರಿದ್ದರು.

# ಸಹಪಂಕ್ತಿ ಭೋಜನದ ಮೂಲಕ ಜಾತ್ಯತೀತ ಸಂದೇಶ: ಬೆಳ್ಳಿ ಪ್ರಕಾಶ್




ಸಿರಿಗೆರೆ : ತರಳಬಾಳು ಬೃಹನ್ಮಠದ ಹಿರಿಯ ಜಗದ್ಗುರು ಲಿಂ. ಶಿವಕುಮಾರ ಶಿವಾಚಾರ್ಯ ಸ್ವಾಮೀಜಿಯವರ 35ನೇ ಶ್ರದ್ಧಾಂಜಲಿ ಸಮಾರಂಭದಲ್ಲಿ ಜಗದ್ಗುರು ಡಾ. ಶಿವಮೂರ್ತಿ ಶಿವಾಚಾರ್ಯ ಸ್ವಾಮೀಜಿ ಹಾಗೂ ಗಣ್ಯರು ಲಿಂ. ಶಿವಕುಮಾರ ಶಿವಾಚಾರ್ಯ ಸ್ವಾಮೀಜಿಯವರ ಹಾಗೂ ಗುರುಶಾಂತೇಶ್ವರ ದೇಶಿಕೇಂದ್ರ ಸ್ವಾಮೀಜಿಯವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಕಾರ್ಯಕ್ರಮಕ್ಕೆ ಮಂಗಳವಾರ ಚಾಲನೆ ನೀಡಿದರು.

ಮಾಜಿ ಶಾಸಕ ಬೆಳ್ಳಿ ಪ್ರಕಾಶ್ ಮಾತನಾಡಿ, ಧರ್ಮ ಎಂದರೆ ಸತ್ಯ ಹಾಗೂ ನ್ಯಾಯದ ಪರ ನಿಲ್ಲುವುದು. ಲಿಂ. ಶಿವಕುಮಾರ ಶ್ರೀಗಳು ಜಾತಿ, ಮತ ಭೇದವಿಲ್ಲದೇ ಗ್ರಾಮೀಣ ಪ್ರದೇಶಗಳಲ್ಲಿ ಶಾಲೆಗಳನ್ನು ಆರಂಭಿಸಿ, ಶೈಕ್ಷಣಿಕ ಅಭಿವೃದ್ಧಿಗೆ ನಾಂದಿ ಹಾಡಿದರು. ಶ್ರೀಗಳ ದೂರದೃಷ್ಟಿಯಿಂದ ಶಿಕ್ಷಣ ಸಂಸ್ಥೆಗಳಲ್ಲಿ ಅನ್ನ ದಾಸೋಹ, ಜ್ಞಾನ ದಾಸೋಹ ನಿರಂತರವಾಗಿ ನಡೆಯುತ್ತಿದೆ. ಸ್ವಾತಂತ್ರ್ಯ ಪೂರ್ವದಲ್ಲಿಯೇ ಪ್ರಸಾದ ನಿಲಯದಲ್ಲಿ ಸಹಪಂಕ್ತಿ ಭೋಜನದ ಮೂಲಕ ಜಾತ್ಯತೀತ ಸಂದೇಶ ಸಾರಿದರು. ನೀರಾವರಿ ಯೋಜನೆಗಳಿಗೆ ವೇಗ ನೀಡುವ ಮೂಲಕ ರೈತರ ಬದುಕಿಗೆ ಆಶಾಕಿರಣ ವಾಗಿದ್ದಾರೆ. ಕುಂಠಿತಗೊಂಡಿರುವ ನೀರಾವರಿ ಯೋಜನೆಗಳಿಗೆ ಮುಖ್ಯಮಂತ್ರಿ ಗಳೊಂದಿಗೆ ಚರ್ಚಿಸಿ ವೇಗ ನೀಡಬೇಕು ಎಂದು ಹೇಳಿದರು.

ಶಿವಮೊಗ್ಗ ಕೃಷಿ ವಿಶ್ವವಿದ್ಯಾಲಯದ ಕುಲಪತಿ ಎಂ.ವಿ.ಧನಂಜಯ ಮಾತನಾಡಿ, ಕೃಷಿ ಕ್ಷೇತ್ರದಲ್ಲಿ ನೂತನ ತಂತ್ರಜ್ಞಾನ ಅಳವಡಿಸುವುದರ ಜತೆಗೆ, ವಿದ್ಯಾರ್ಥಿಗಳನ್ನು ಉತ್ತಮ ಪ್ರಜೆಗಳನ್ನಾಗಿ ರೂಪಿಸುವ ಜವಾಬ್ದಾರಿಯನ್ನೂ ಶಿಕ್ಷಣ ಸಂಸ್ಥೆಗಳು ನಿರ್ವಹಿಸುತ್ತಿವೆ. ಯುವಕ – ಯುವತಿಯರಿಗೆ ಉದ್ಯೋಗಾವಕಾಶ ಕಲ್ಪಿಸಲು ಅಗತ್ಯ ಮಾರ್ಗದರ್ಶನ ಮತ್ತು ಸಹಕಾರ ನೀಡಬೇಕು. ದೇಶದಲ್ಲಿ 113 ಐಸಿಎಆರ್ ಸಂಸ್ಥೆಗಳು ವಿವಿಧ ಕ್ಷೇತ್ರಗಳಲ್ಲಿ ಸಂಶೋಧನೆ ನಡೆಸುತ್ತಿವೆ. ಕೃಷಿ ವಿಶ್ವವಿದ್ಯಾಲಯಗಳ ಸಂಶೋಧನೆ, ರೈತ ಸಂಪರ್ಕ ಕೇಂದ್ರಗಳ ಸೇವೆ ಹಾಗೂ ತಾಂತ್ರಿಕ ಮಾರ್ಗದರ್ಶನ ರಾಜ್ಯದ ಎಲ್ಲ ರೈತರಿಗೆ ತಲುಪಬೇಕು. ರೈತರಿಗೆ ಅಗತ್ಯ ಸಂದರ್ಭದಲ್ಲಿ ಬೆಳೆ ಪರಿಹಾರ ಸೇರಿದಂತೆ ಸೂಕ್ತ ನೆರವು ದೊರೆಯುವಂತೆ ಕೃಷಿ ಸಂಸ್ಥೆಗಳು ಸಹಕರಿಸಬೇಕು ಎಂದು ಹೇಳಿದರು.

ರಾಜ್ಯ ಸಫಾಯಿ ಮತ್ತು ಕರ್ಮಚಾರಿ ಅಧ್ಯಕ್ಷ ಪಿ.ರಘು ಮಾತನಾಡಿ, ತರಳಬಾಳು ವಿದ್ಯಾಸಂಸ್ಥೆ ಯಲ್ಲಿ ತಾವೂ ಸಹ ವ್ಯಾಸಂಗ ಮಾಡಿದ್ದು, ಸಂಸ್ಥೆಯ ಶಿಕ್ಷಣ ಮತ್ತು ಸಂಸ್ಕಾರದಿಂದ ಸಮಾಜಮುಖಿ ಕಾರ್ಯಗಳಿಗೆ ಪ್ರೇರಣೆ ದೊರೆತಿದೆ ಎಂದರು. ಡಾ. ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮೀಜಿ ರೈತರು ಆರ್ಥಿಕವಾಗಿ ಸಬಲರಾಗಬೇಕು ಎಂಬ ಉದ್ದೇಶದಿಂದ ಕೆರೆಗಳಿಗೆ ನೀರು ಹರಿಸುವ ಮಹತ್ವದ ಕಾರ್ಯ ಕೈಗೊಂಡಿದ್ದು, ನೀರಾವರಿ ಕ್ಷೇತ್ರದಲ್ಲಿ ಆಧುನಿಕ ಭಗೀರಥರಂತೆ ಶ್ರಮಿಸುತ್ತಿದ್ದಾರೆ ಎಂದು ರಘು ಶ್ಲಾಘಿಸಿದರು.

ವಿಶ್ರಾಂತ ಪ್ರಾಚಾರ್ಯ ನಾ. ಲೋಕೇಶ್ ಒಡೆ–ಯರ್ ಅವರು ಶ್ರೀ ಶಿವಕುಮಾರ ಶಿವಾಚಾರ್ಯ ಮಹಾಸ್ವಾಮಿಗಳವರ ಶೈಕ್ಷಣಿಕ ಕ್ರಾಂತಿ ವಿಷಯ ಮಂಡಿಸಿದರು.

ದಾವಣಗೆರೆ ವಿಶ್ವವಿದ್ಯಾಲಯ ಕುಲಪತಿ ಡಾ.ರಂಗಸ್ವಾಮಿ, ಕಲಿಕೇರಿ, ಮಾಜಿ ಸಹಕಾರ ಸಚಿವ ಎಸ್.ಎಸ್.ಪಾಟೀಲ್ ಸೇರಿದಂತೆ, ಅನೇಕ ಗಣ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ದಾವಣಗೆರೆ ಸುಶ್ರಾವ್ಯ ಸಂಗೀತ ವಿದ್ಯಾಲಯದ ಯಶಾ ದಿನೇಶ್ ವಚನ ಗೀತೆ, ಸಿರಿಗೆರೆ ತರಳಬಾಳು ಕಲಾಸಂಘದಿಂದ ವೀಣಾ ವಾದನ, ಕಥಕ್, ಕಂಗೀಲು, ಜಡೆ ಕೋಲಾಟ, ಪ್ರೌಢಶಾಲಾ ಹಾಗೂ ಕಾಲೇಜು ವಿದ್ಯಾರ್ಥಿಗಳಿಂದ ಹಾಗೂ ದಾವಣಗೆರೆ ಆರ್ಯಶಂಭು ಅವರಿಂದ ನೃತ್ಯ ಪ್ರದರ್ಶನ, ದಾವಣಗೆರೆ ಕಲ್ಪಕಲಾ ವಿದುಷಿ ಅಶ್ವಿಕಾ ಅವರಿಂದ ಭರತನಾಟ್ಯ ಪ್ರದರ್ಶನ ಜರುಗಿತು.

# ಚುನಾವಣಾ ನೀತಿ ಸಂಹಿತೆಯ ನಡುವೆ ಹಂಪಿ ಉತ್ಸವ: ನವೆಂಬರ್ ಕನಸಾಗದಿರಲಿ



ವಿಶ್ವವಿಖ್ಯಾತ ಹಂಪಿ ಎಂದ–ರೆ ಕೇವಲ ಕಲ್ಲಿನ ಸ್ಮಾರಕಗಳ ಸಮೂಹವಲ್ಲ. ಅದು ವಿಜಯನಗರ ಸಾಮ್ರಾಜ್ಯದ ವೈಭವವನ್ನು ಸಾರುವ ಜೀವಂತ ಇತಿಹಾಸ. ಹಂಪಿಯ ಕಲೆ, ವಾಸ್ತುಶಿಲ್ಪ, ಸಂಗೀತ, ಸಂಸ್ಕೃತಿ ಹಾಗೂ ಪರಂಪರೆಯನ್ನು ಜನಸಾಮಾನ್ಯರ ಮುಂದೆ ಮತ್ತೊಮ್ಮೆ ಅನಾವರಣಗೊಳಿಸುವ ಪ್ರಮುಖ ವೇದಿಕೆಯೇ ಹಂಪಿ ಉತ್ಸವ.

ಪ್ರತಿ ವರ್ಷ ಹಂಪಿ ಉತ್ಸವವನ್ನು ಕಾತರದಿಂದ ಎದುರು ನೋಡುವ ಜನರಿಗೆ ಈ ಬಾರಿ ಕೂಡ ಹಲವು ಪ್ರಶ್ನೆಗಳು ಕಾಡುತಿವೆ. ವಿಶೇಷವಾಗಿ ರಾಜ್ಯದಲ್ಲಿ ಚುನಾವಣಾ ಪ್ರಕ್ರಿಯೆ ನಡೆಯುತ್ತಿರುವ ಹಿನ್ನೆಲೆಯಲ್ಲಿ ಜಾರಿಯಲ್ಲಿರುವ ಮಾದರಿ ನೀತಿ ಸಂಹಿತೆ ಉತ್ಸವದ ಆಯೋಜನೆ ಮೇಲೆ ಪರಿಣಾಮ ಬೀರುತ್ತದೆಯೇ ಎಂಬ ಆತಂಕ ಜಿಲ್ಲೆಯ ಜನರಲ್ಲಿ ಮೂಡಿದೆ. ಸೆಪ್ಟೆಂಬರ್ 22ರಿಂದ ಕರ್ನಾಟಕದ ನಾಲ್ಕು ವಿಧಾನ ಪರಿಷತ್ ಕ್ಷೇತ್ರಗಳಿಗೆ ಸಂಬಂಧಿಸಿದ ಚುನಾವಣಾ ಮಾದರಿ ನೀತಿ ಸಂಹಿತೆ ಜಾರಿಯಲ್ಲಿದೆ. ಆದರೆ ಈ ಸಂದರ್ಭದಲ್ಲಿ ಒಂದು ವಿಷಯ ಸ್ಪಷ್ಟವಾಗಿರಬೇಕು. ಹಂಪಿ ಉತ್ಸವ ರದ್ದಾಗಿದೆ ಅಥವಾ ಈ ವರ್ಷ ನಡೆಯುವುದಿಲ್ಲ ಎಂದು ಅಧಿಕೃತವಾಗಿ ಘೋಷಣೆಯಾಗಿಲ್ಲ. ಇದರ ನಡುವೆಯೇ, “ನವೆಂಬರ್ನಲ್ಲೇ ಹಂಪಿ ಉತ್ಸವ ಆಯೋಜಿಸಲು ಸರ್ಕಾರ ಬದ್ಧವಾಗಿದೆ” ಎಂದು ನಿಕಟಪೂರ್ವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿರುವ ಮಾತು ಕನಸಾಗದಿರಲಿ.

ಹಂಪಿ ಉತ್ಸವ ಕೇವಲ ಮೂರು ದಿನಗಳ ಸಾಂಸ್ಕೃತಿಕ ಕಾರ್ಯಕ್ರಮವಲ್ಲ. ಇದು ವಿಜಯನಗರ ಜಿಲ್ಲೆಯ ಪ್ರವಾಸೋದ್ಯಮ, ಸ್ಥಳೀಯ ವ್ಯಾಪಾರ, ಹೋಟೆಲ್ ಉದ್ಯಮ, ಸಾರಿಗೆ, ಕಲಾವಿದರು, ಕರಕುಶಲಗಾರರು ಮತ್ತು ಸಣ್ಣ ವ್ಯಾಪಾರಿಗಳಿಗೆ ಆರ್ಥಿಕವಾಗಿ ಸದೃಢವಾಗವ ಸಂದರ್ಭವಾಗಿದೆ. ಸ್ಥಳೀಯ ಕಲಾವಿದರಿಗೆ ವೇದಿಕೆ, ಜಾನಪದ ಕಲೆ, ಸಂಗೀತ, ನೃತ್ಯ ಹಾಗೂ ಸಾಂಸ್ಕೃತಿಕ ಪರಂಪರೆಗೆ ರಾಜ್ಯ ಮತ್ತು ದೇಶದ ಮಟ್ಟದಲ್ಲಿ ಗಮನ ಸೆಳೆಯಲು ಅವಕಾಶ ದೊರೆಯುತ್ತದೆ.

ಹೀಗಾಗಿ ಹಂಪಿ ಉತ್ಸವ ನಡೆಯಬೇಕು ಎಂಬುದು ಕೇವಲ ಸರ್ಕಾರದ ಕಾರ್ಯಕ್ರಮದ ಬೇಡಿಕೆಯಲ್ಲ; ಅದು ಜಿಲ್ಲೆಯ ಸಾಂಸ್ಕೃತಿಕ ಮತ್ತು ಪ್ರವಾಸೋದ್ಯಮದ ಆಶಯವೂ ಆಗಿದೆ. ಈ ನಿಟ್ಟಿನಲ್ಲಿ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿದ್ದು, ಸರ್ಕಾರದ ಕಾರ್ಯಕ್ರಮಗಳ ಕುರಿತು ಚುನಾವಣಾ ಆಯೋಗದ ನಿಯಮಗಳು ಮತ್ತು ಸಂಬಂಧಿತ ಅನುಮತಿಗಳನ್ನು ಪಾಲಿಸಬೇಕಾಗುತ್ತದೆ. ವಿಶೇಷವಾಗಿ ಸರ್ಕಾರಿ ಕಾರ್ಯಕ್ರಮವನ್ನು ರಾಜಕೀಯ ಪ್ರಚಾರ–ಕ್ಕೆ ಬಳಸುವಂತಿಲ್ಲ. ಆದರೆ ಇದ–ರಿಂದ ಹಂಪಿಯಂತಹ ಸಾಂಸ್ಕೃತಿಕ ಕಾರ್ಯಕ್ರಮವನ್ನು ಸ್ವಯಂಚಾಲಿತವಾಗಿ ರದ್ದುಪಡಿಸಲೇಬೇಕು ಎಂಬ ನಿರ್ಣಯಕ್ಕೆ ಬರಲು ಸಾಧ್ಯವಿಲ್ಲ. ಕಾರ್ಯಕ್ರಮದ ಸ್ವರೂಪ, ವೆಚ್ಚ, ಪ್ರಚಾರ, ಸರ್ಕಾರಿ ಪ್ರತಿನಿಧಿಗಳ ಭಾಗವಹಿಸುವಿಕೆ ಸೇರಿದಂತೆ ಹಲವು ಅಂಶಗಳನ್ನು ಸಂಬಂಧಿತ ಚುನಾವಣಾ ಅಧಿಕಾರಿಗಳು ಪರಿಶೀಲಿಸಬೇಕಾಗುತ್ತದೆ. ಆದ್ದರಿಂದ ಉತ್ಸವ ನಡೆಯುತ್ತದೆಯೇ ಅಥವಾ ದಿನಾಂಕ ಬದಲಾಗುತ್ತದೆಯೇ ಎಂಬುದನ್ನು ಕಾದು ನೋಡಬೇಕಿದೆ.

# ಚನ್ನಗಿರಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಸರ್ವ ಸದಸ್ಯರ ವಾರ್ಷಿಕ ಮಹಾಸಭೆ



ಚನ್ನಗಿರಿ : ಪಟ್ಟಣದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ 2025–26ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯು ಬುಧುವಾರ ಸಂಘದ ಆಡಳಿತಾಧಿಕಾರಿ ವಿ.ವಿಜಯ ಇವರ ಅಧ್ಯಕ್ಷತೆಯಲ್ಲಿ ನಡೆಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಅವರು ಈ ಸಂಘದಲ್ಲಿ 2.100ಜನ ನೊಂದಾಯಿತ ಸದಸ್ಯರಿದ್ದು ಇವರೆಲ್ಲರ ಸಹಕಾರದಿಂದ ಈ ಸಹಕಾರ ಸಂಘವು ಲಾಭದಾಯಕದಲ್ಲಿದ್ದು ರೈತರು ಪಡೆದ ಸಾಲವನ್ನು ಸಕಾಲದಲ್ಲಿ ಮರುಪಾವತಿ ಮಾಡುವ ಮೂಲಕ ಸಂಘದ ಪ್ರಗತಿಗೆ ಸಹಕಾರ ನೀಡಿದ್ದಾರೆ ಎಂದರು.

ಈ ಸಹಕಾರ ಸಂಘಕ್ಕೆ ಆಡಳಿತ ಮಂಡಳಿಯ ಸದಸ್ಯರ ಚುನಾವಣೆಯನ್ನು ಮುಂದಿನ 2ತಿಂಗಳ ಒಳಗಾಗಿ ನಡೆಸಲಿದ್ದು ಈಗಾಗಲೇ ಕರಡು ಮತದಾರರ ಪಟ್ಟಿಯನ್ನು ಸಂಘದ ಕಛೇರಿಯಲ್ಲಿ ಪ್ರಕಟಿಸಲಾಗಿದೆ ಎಂದು ತಿಳಿಸಿದರು.

ಸಂಘದ ಸರ್ವ ಸದಸ್ಯರ ಸಹಕಾರದಿಂದ ಸಂಘವು 2025–26ನೇ ಸಾಲಿಗೆ 6.70.721ಲಕ್ಷ ಲಾಭವನ್ನು ಗಳಿಸಿದೆ ಎಂದು ತಿಳಿಸಿದರು.

ಸಂಘದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಹೆಚ್.ಸಂತೋಷ್ ಮಾತನಾಡಿ ರೈತರ ಸಹಕಾರದಿಂದ ಸಂಘವು ಪ್ರಗತಿದಾಯವಾಗಿ ಮುನ್ನಡೆಯುತ್ತಿದ್ದು ಇದುವರೆಗೂ ಸಂಘದ ಆಡಳಿತ ಮಂಡಳಿಯಲ್ಲಿ ಕೆಲಸ ಮಾಡಿದ ಎಲ್ಲಾ ನಿರ್ದೇಶಕರು, ಅಧ್ಯಕ್ಷರು ಮತ್ತು ಉಪಾಧ್ಯಕ್ಷರುಗಳ ಸಹಕಾರದಿಂದ ಇಂದು ಸಂಘವು ಪ್ರಗತಿ ಪಥದತ್ತ ಮುನ್ನಡೆಯುತ್ತಿದೆ ಎಂದರು.

ಸಭೆಯಲ್ಲಿ 2025–26ನೇ ಸಾಲಿನ ವಾರ್ಷಿಕ ವರದಿ ಓದಿ ರೆಕಾರ್ಡ ಮಾಡಲಾಯಿತು, ತಾತ್ಕಾಲಿಕ ಆಡಿಟ್ ಆದ ಜಮಾ–ಖರ್ಚು, ಲಾಭ–ನಷ್ಟದ ತಖ್ತೆ, ಆಸ್ತಿ ಜವಾಬ್ದಾರಿ ತಖ್ತೆಗಳನ್ನು ಓದಿ ರೆಕಾರ್ಡ ಮಾಡಲಾಯಿತು.

2026–27ನೇ ಸಾಲಿನ ಆಯ–ವ್ಯಯದ ಮಂಜೂರಾತಿಯನ್ನು ಪಡೆಯಲಾಯಿತು, ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕಿನಿಂದ ಬರಬಹುದಾದ ವಿವಿಧ ಸಾಲಗಳ ಪರಿಮಿತಿಯ ಬಗ್ಗೆ ಚರ್ಚೆ ನಡೆಸಲಾಯಿತು.

ಸಮಾರಂಭಕ್ಕೂ ಮುನ್ನ ನಿಧನಹೊಂದಿದ ಸಂಘದ ಸದಸ್ಯರಿಗೆ ಶ್ರದ್ಧಾಂಜಲಿಯನ್ನು ಸಲ್ಲಿಸಲಾಯಿತು.

ಮುಖ್ಯ ಅತಿಥಿಗಳಾಗಿ ಡಿಸಿಸಿ ಬ್ಯಾಂಕಿನ ಕ್ಷೇತ್ರಾಧಿಕಾರಿ ಚಂದ್ರಪ್ರಕಾಶ್, ಸಂಘದ ಕಾರ್ಯನಿರ್ವಾಹಕ ಅಧಿಕಾರಿ ಸಂತೋಷ್, ಸುನೀಲ್ ಕುಮಾರ್, ಸಂಘದ ಮಾಜಿ ಅಧ್ಯಕ್ಷರಾದ ಕಾಫೀಪುಡಿ ಶಿವಾಜಿರಾವ್, ಜಿ.ಚಿನ್ನಸ್ವಾಮಿ, ನಾಗರಾಜಚಾರ್ ಸೇರಿದಂತೆ ಸದಸ್ಯರುಗಳು ಹಾಜರಿದ್ದರು.

## ರಾಜ್ಯಮಟ್ಟದ ರೋಲರ್ ಸ್ಕೇಟಿಂಗ್ ಚಾಂಪಿಯನ್‌ಶಿಪ್‌ನಲ್ಲಿ

# ದಾವಣಗೆರೆ ಕ್ರೀಡಾಪಟುಗಳ ಸಾಧನೆ



ದಾವಣಗೆರೆ : ಶಿವಮೊಗ್ಗದಲ್ಲಿ ಸೆ.20ರಂದು ನಡೆದ ಪ್ರಥಮ ರಾಜ್ಯಮಟ್ಟದ ಅಂತರ ಶಾಲಾ ತೆರೆದ ರೋಲರ್ ಸ್ಕೇಟಿಂಗ್ ಚಾಂಪಿಯನ್‌ಶಿಪ್‌ನಲ್ಲಿ ನ್ಯೂ ದಾವಣಗೆರೆ ಡಿಸ್ಟ್ರಿಕ್ಟ್ ರೋಲರ್ ಸ್ಕೇಟಿಂಗ್ ಅಸೋಸಿಯೇಷನ್‌ನ ಕ್ರೀಡಾಪಟುಗಳು ಉತ್ತಮ ಸಾಧನೆ ಮಾಡಿದ್ದಾರೆ.

ಚಾಂಪಿಯನ್‌ಶಿಪ್‌ನಲ್ಲಿ ದಾವಣಗೆರೆ ಜಿಲ್ಲೆಯ ಕ್ರೀಡಾಪಟುಗಳು ವಿವಿಧ ವಿಭಾಗಗಳಲ್ಲಿ 17 ಚಿನ್ನ, 5 ಬೆಳ್ಳಿ ಹಾಗೂ 4 ಕಂಚಿನ ಪದಕಗಳನ್ನು ಗೆದ್ದು ರಾಜ್ಯಮಟ್ಟದಲ್ಲಿ ದ್ವಿತೀಯ ಸ್ಥಾನ ಪಡೆದಿದ್ದಾರೆ. ಪದಕ ವಿಜೇತರಲ್ಲಿ ಸಾಯಿ ನಿಶ್ವಿಕ್ ಡಿಜೆ, ಅಮೈರಾ, ಚಿರಕ್ಷ ಎ.ಗೌಡ, ಶ್ರೀವತ್ಸ ಎಸ್. ಮಹೇಂದ್ರಕರ್, ನಾಗ್ ಹಿತಾಶ್ ಪಿ.ಎನ್., ನಂದಕಿಶೋರ್ ವಿ.ಕೆ., ಧನ್ವಿನ್ ಎಲ್.ಯು., ತ್ರಿಶಿಕ್ ಟಿ., ಶ್ರೀರಾಮ್ ಎಸ್. ಮಹೇಂದ್ರಕರ್, ನಮ್ಯ ಎಂ., ಶರತ್ ಕೆ.ಎಲ್., ನಾಯಿರ್ ಬಾನು, ಪ್ರಜ್ಞಾ ಬಿ.ಎಂ., ಸ್ಟೀಫನ್ ರಾಯ್ ಜೆ., ತ್ರೀಶ್ ಜಿ.ಬಿ., ಧೃತಿಕ್ ಬಿ., ನೇಹಾ ಅಂತೋನಿ ಎ., ಗಾನವಿ ಜೆ. ಹಾಗೂ ಶ್ರೇಯಸ್ ಎಸ್. ಸೇರಿದಂತೆ ಹಲವರು ಉತ್ತಮ ಪ್ರದರ್ಶನ ನೀಡಿದ್ದಾರೆ. ಜಿಲ್ಲೆಯ ಕ್ರೀಡಾಪಟುಗಳ ಸಾಧನೆಗೆ ನ್ಯೂ ದಾವಣಗೆರೆ ಡಿಸ್ಟ್ರಿಕ್ಟ್ ರೋಲರ್ ಸ್ಕೇಟಿಂಗ್ ಅಧ್ಯಕ್ಷ ವಿಶ್ವಜಿತ್ ಜಾಧವ್, ಉಪಾಧ್ಯಕ್ಷ ತುಕಾರಾಮಪ್ಪ ಅರಳ್ ಹಾಗೂ ತರಬೇತುದಾರ ಸಂತೋಷ್ ಟಿ.ಎನ್. ಅಭಿನಂದನೆ ಸಲ್ಲಿಸಿದ್ದಾರೆ. ಕ್ರೀಡಾಪಟುಗಳ ಸಾಧನೆಗೆ ಪೋಷಕರು ಹಾಗೂ ತರಬೇತುದಾರರ ಸಹಕಾರ ಪ್ರಮುಖವಾಗಿದೆ ಎಂದು ಅವರು ತಿಳಿಸಿದ್ದಾರೆ.

# ಎಸ್‌ಐಆರ್ ಮೂಲಕ ಮತದಾನದ ಹಕ್ಕು ಕಸಿಯುವ ಪ್ರಯತ್ನ: ಪ್ರಕಾಶ್ ರಾಜ್



ರಾಯಚೂರು: 'ದೇಶದಲ್ಲಿ ಮಿಲಿಟರಿ ಆಡಳಿತ ಜಾರಿಗೆ ತರಲು ಸಾಧ್ಯವಾಗದಿರುವುದಕ್ಕೆ ಡಾ.ಬಿ.ಆರ್.ಅಂಬೇಡ್ಕರ್ ಅವರು ರಚಿಸಿದ ಸಂವಿಧಾನವೇ ಕಾರಣ.

ಹೀಗಾಗಿ ಚುನಾವಣಾ ಆಯೋಗ, ಜಾರಿ ನಿರ್ದೇಶನಾಲಯ ಸೇರಿದಂತೆ ವಿವಿಧ ಸಂಸ್ಥೆಗಳನ್ನು ಬಳಸಿಕೊಂಡು ಮತದಾನದ ಹಕ್ಕನ್ನು ದುರ್ಬಲಗೊಳಿಸುವ ಪ್ರಯತ್ನ ನಡೆಯುತ್ತಿದೆ' ಎಂದು ಬಹುಭಾಷಾ ನಟ ಪ್ರಕಾಶ್ ರಾಜ್ ಆರೋಪಿಸಿದರು.

ನಗರದ ಕೊಠಾರಿ ಫಂಕ್ಷನ್ ಹಾಲ್‌ನಲ್ಲಿ ಬುಧವಾರ ಎಸ್‌ಐಆರ್ ವಿರೋಧಿ ಹೋರಾಟ ಸಮಿತಿ ಹಾಗೂ ಮತ ಕಾವಲು ಸಮಿತಿ ವತಿಯಿಂದ ಆಯೋಜಿಸಿದ್ದ 'ಎಸ್‌ಐಆರ್ ಪರಿಶೋಧನೆ ಹಾಗೂ ಪ್ರತಿರೋಧ ಪ್ರವಾಸ' ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. 'ಚುನಾವಣಾ ಆಯೋಗದ ಕಾರ್ಯವೈಖರಿ ಕುರಿತು ಹಲವು ಪ್ರಶ್ನೆಗಳು ಎದ್ದಿವೆ. ಆಯೋಗದ ಅಧಿಕಾರಿಗಳ ಹೇಳಿಕೆಗಳಲ್ಲೇ ಕೆಲವು ಲೋಪಗಳು ಬಹಿರಂಗವಾಗಿವೆ. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶಕುಮಾರ ಯಾರ ಮಾತು ಕೇಳುತ್ತಿದ್ದಾರೆ' ಎಂದು ಅವರು ಪ್ರಶ್ನಿಸಿದರು. 'ಮನೆ ಬದಲಾಯಿಸಿದವರು, ಮನೆ ಇಲ್ಲದವರು ಸೇರಿದಂತೆ ಹಲವು ಕಾರಣಗಳಿಂದ ಮತದಾರರ ಪಟ್ಟಿಯಿಂದ ಹೆಸರುಗಳನ್ನು ತೆಗೆದುಹಾಕಲಾಗುತ್ತಿದೆ. ಮತದಾರರ ಪಟ್ಟಿಯಲ್ಲಿನ ದೋಷಗಳನ್ನು ಸರಿಪಡಿಸುವ ಹೆಸರಿನಲ್ಲಿ ಅರ್ಹ ಮತದಾರರ ಹಕ್ಕಿಗೆ ಧಕ್ಕೆ ಆಗಬಾರದು. ಅವಳಿ–ಜವಳಿ ಮಕ್ಕಳ ವಯಸ್ಸಿನ ಅಂತರ ಸೇರಿದಂತೆ ತಾಂತ್ರಿಕ ಕಾರಣಗಳನ್ನು ಮುಂದಿಟ್ಟುಕೊಂಡು ಹೆಸರುಗಳನ್ನು ಕೈಬಿಡುವುದು ಸರಿಯಲ್ಲ' ಎಂದರು. 'ತೃತೀಯ ಲಿಂಗಿಗಳು ಹಾಗೂ ವಲಸೆ ಕಾರ್ಮಿಕರು ಸೇರಿದಂತೆ ವಿವಿಧ ಸಮುದಾಯದ ಜನರಿಂದ ದಾಖಲೆಗಳನ್ನು ಕೇಳಲಾಗುತ್ತಿದೆ. ಇಂತಹ ಸಂದರ್ಭದಲ್ಲಿ ಸಾಮಾನ್ಯ ಮತದಾರರ ಸ್ಥಿತಿ ಏನು ಎಂಬುದನ್ನು ಪರಿಗಣಿಸಬೇಕು. ಎಲ್ಲರಿಗೂ ಸಮಾನ ಮತದಾನದ ಹಕ್ಕು ದೊರೆಯಬೇಕು' ಎಂದು ಹೇಳಿದರು.

'ಎಸ್‌ಐಆರ್ ದೊಡ್ಡ ಅನಾಹುತಕ್ಕೆ ಕಾರಣವಾಗಬಹುದು. ಒಂದು ತಿಂಗಳಲ್ಲಿ ಕೋಟ್ಯಂತರ ಜನರ ಮತದಾರರ ಪಟ್ಟಿಯನ್ನು ಪರಿಶೀಲಿಸುವುದು ಹೇಗೆ ಸಾಧ್ಯ? ಕರ್ನಾಟಕದ 100 ಮತಗಟ್ಟೆಗಳಿಗೆ ಭೇಟಿ ನೀಡಿ, ಎಲ್ಲಿ ಯಾವ ರೀತಿಯ ಲೋಪವಾಗಿದೆ ಎಂಬುದನ್ನು ಪರಿಶೀಲಿಸಲಾಗುವುದು. ಸಂತ್ರಸ್ತ ಮತದಾರರಿಂದ ದಾಖಲೆ ಹಾಗೂ ಮಾಹಿತಿ ಸಂಗ್ರಹಿಸಿ ಸೆ.30ರಂದು ಮುಖ್ಯಮಂತ್ರಿ ಹಾಗೂ ಸಚಿವರನ್ನು ಭೇಟಿ ಮಾಡಿ ಮನವರಿಕೆ ಮಾಡಲಾಗುವುದು. ಅ.1ರಂದು ದೆಹಲಿಯಲ್ಲಿ ಸಭೆ ನಡೆಸಿ ವಿಷಯವನ್ನು ರಾಷ್ಟ್ರಮಟ್ಟದಲ್ಲಿ ಗಮನಕ್ಕೆ ತರಲಾಗುವುದು' ಎಂದರು. ಎಸ್‌ಐಆರ್ ವಿರೋಧಿ ಸಮಿತಿಯ ಎಂ.ಆರ್.ಬೇರಿ, ಮಾರೆಪ್ಪ ಹರವಿ, ಮತದಾರರ ಹಕ್ಕು ಕಳೆದುಕೊಂಡಿರುವ ಜಾನ್ ವೆಸ್ಲಿ, ಮಾರೆಮ್ಮ, ಹೋರಾಟಗಾರ ಬಸವರಾಜ ಕಳಸ, ಮತೀನ್ ಅನ್ಸಾರಿ ಉಪಸ್ಥಿತರಿದ್ದರು

## ಒಂದನೇ ಪುಟದಿಂದ...

# ವಿಜಯಪುರ ಜಿಲ್ಲೆಯನ್ನು ಸಂಪೂರ್ಣ ಬರಪೀಡಿತ ಜಿಲ್ಲೆ ಎಂದು ಘೋಷಿಸಲು ಆಗ್ರಹ

ಈ ಸಂದರ್ಭದಲ್ಲಿ ಮಾತನಾಡಿದ ಎ.ಎಸ್. ಪಾಟೀಲ ನಡಹಳ್ಳಿ, ರಾಜ್ಯ ಸರ್ಕಾರ ದಿನಕ್ಕೊಂದು ತಾಲ್ಲೂಕನ್ನು ಬರಪೀಡಿತ ಎಂದು ಘೋಷಿಸುವ ಮೂಲಕ ರೈತರ ಬದುಕಿನೊಂದಿಗೆ ಚೆಲ್ಲಾಟವಾಡುತ್ತಿದೆ ಎಂದು ಆರೋಪಿಸಿದರು. ಇಡೀ ವಿಜಯಪುರ ಜಿಲ್ಲೆಯನ್ನು ಒಂದೇ ಬಾರಿಗೆ ಬರಪೀಡಿತ ಎಂದು ಘೋಷಿಸುವ ಸಾಧ್ಯತೆ ಇದ್ದರೂ ಸರ್ಕಾರ ಈ ರೀತಿಯ ರೈತ ವಿರೋಧಿ ನೀತಿ ಅನುಸರಿಸುತ್ತಿರುವುದೇಕೆ ಎಂದು ಪ್ರಶ್ನಿಸಿದರು.

ಬರಗಾಲದ ಸಂದರ್ಭದಲ್ಲಿ ರಾಜ್ಯ ಸರ್ಕಾರ ಕಿಂಚಿತ್ತೂ ಕಾಳಜಿ ತೋರುತ್ತಿಲ್ಲ. ಬರ ಪರಿಸ್ಥಿತಿಯ ಬಗ್ಗೆ ಸರ್ಕಾರ ಯಾವುದೇ ಬದ್ಧತೆ ಪ್ರದರ್ಶಿಸದಿರುವುದು ರೈತ ಸಮುದಾಯದ ಆಕ್ರೋಶಕ್ಕೆ ಕಾರಣವಾಗಿದೆ. ರೈತರ ಬಗ್ಗೆ ಸರ್ಕಾರ ಇದೇ ನಿರ್ಲಕ್ಷ್ಯ ಮುಂದುವರಿಸಿದರೆ ಅವರ ಶಾಪ ಕಾಂಗ್ರೆಸ್ ಸರ್ಕಾರಕ್ಕೆ ತಟ್ಟಲಿದೆ ಎಂದು ಎಚ್ಚರಿಸಿದರು.

ಸಂಸದ ರಮೇಶ ಜಿಗಜಿಣಗಿ ಮಾತನಾಡಿ, ರೈತರ ಕಷ್ಟ ಸರ್ಕಾರಕ್ಕೆ ಅರ್ಥವಾಗುತ್ತಿಲ್ಲ. ರೈತರು ಎದುರಿಸುತ್ತಿರುವ ಸಮಸ್ಯೆಗಳ ಅರಿವು ಹಾಗೂ ಕನಿಷ್ಠ ಮಾನವೀಯ ಸೌಜನ್ಯ ಸರ್ಕಾರದ ಬಳಿ ಇದೆಯೇ ಎಂಬುದೇ ಪ್ರಶ್ನೆಯಾಗಿದೆ ಎಂದು ಟೀಕಿಸಿದರು.

ಮಾಜಿ ಸಚಿವ ಅಪ್ಪಾಸಾಹೇಬ ಪಟ್ಟಣಶೆಟ್ಟಿ ಮಾತನಾಡಿ, ರೈತ ಸಮುದಾಯ ಸಂಕಷ್ಟದಲ್ಲಿದ್ದು, ಕೂಡಲೇ ಬರಪೀಡಿತ ಪ್ರದೇಶಗಳನ್ನು ಘೋಷಿಸುವುದರ ಜೊತೆಗೆ ಬರ ಪರಿಹಾರಕ್ಕೆ ಸೀಮಿತವಾಗದೆ ಎಲ್ಲ ವಿಧದ ರೈತರ ಸಾಲವನ್ನು ಮನ್ನಾ ಮಾಡಬೇಕು. ಸಾಲ ವಸೂಲಾತಿಯನ್ನು ಬಲವಂತವಾಗಿ ನಡೆಸದಂತೆ ಕ್ರಮ ಕೈಗೊಂಡು, ತಕ್ಷಣ ರೈತರ ನೆರವಿಗೆ ಸರ್ಕಾರ ಧಾವಿಸಬೇಕು ಎಂದು ಆಗ್ರಹಿಸಿದರು.

ಬಿಜೆಪಿ ಎಸ್‌ಸಿ ಮೋರ್ಚಾ ರಾಜ್ಯ ಪ್ರಧಾನ ಕಾರ್ಯದರ್ಶಿ ಉಮೇಶ ಕಾರಜೋಳ ಮಾತನಾಡಿ, ವಿಜಯಪುರ ಜಿಲ್ಲೆಯನ್ನು ಭೀಕರ ಬರಪೀಡಿತ ಜಿಲ್ಲೆ ಎಂದು ಘೋಷಿಸಬೇಕು. ಈ ಸಂದರ್ಭದಲ್ಲಿ ರೈತರೊಂದಿಗೆ ನಿಲ್ಲಬೇಕಾದ ನಾಗಠಾಣ ಶಾಸಕ ಗೈರುಹಾಜರಾಗಿರುವುದಕ್ಕೆ ಅಸಮಾಧಾನ ವ್ಯಕ್ತಪಡಿಸಿದರು. ರೈತರ ಸಂಕಷ್ಟಕ್ಕೆ ಸ್ಪಂದಿಸಬೇಕಾದ ಶಾಸಕರು ವಿಧಾನಸಭೆಯಲ್ಲಿಯೂ ಈ ಕುರಿತು ಧ್ವನಿ ಎತ್ತುತ್ತಿಲ್ಲ ಎಂದು ಆರೋಪಿಸಿದರು.

ಧರಣಿ ಸ್ಥಳಕ್ಕೆ ಆಗಮಿಸಿದ ಜಿಲ್ಲಾಧಿಕಾರಿ ಕೆ. ಆನಂದ್ ಅವರ ಮೂಲಕ ಮುಖ್ಯಮಂತ್ರಿ ಅವರಿಗೆ ಮನವಿ ಸಲ್ಲಿಸಲಾಯಿತು. ಬರಪೀಡಿತ ರೈತರಿಗೆ ತಕ್ಷಣ ಸೂಕ್ತ ಪರಿಹಾರ ಹಾಗೂ ಅಗತ್ಯ ನೆರವು ಒದಗಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಯಿತು.

ಧರಣಿಯಲ್ಲಿ ಮಾಜಿ ಶಾಸಕರಾದ ರಮೇಶ ಭೂಸನೂರ, ಸೋಮನಗೌಡ ಪಾಟೀಲ ಸಾಸನೂರ, ವಿಜುಗೌಡ ಪಾಟೀಲ, ಸಂಜಯ ಐಹೊಳೆ, ಕಾಸುಗೌಡ ಬಿರಾದಾರ ಸೇರಿದಂತೆ ಬಿಜೆಪಿ ಮುಖಂಡರು, ಕಾರ್ಯಕರ್ತರು ಹಾಗೂ ರೈತ ಮೋರ್ಚಾ ಪದಾಧಿಕಾರಿಗಳು ಭಾಗವಹಿಸಿದ್ದರು.

# ಪೌರಕಾರ್ಮಿಕರ ಸುರಕ್ಷತೆ, ಸವಲತ್ತುಗಳಿಗೆ ಆದ್ಯತೆ ನೀಡಿ

## ಸರ್ಕಾರದ ಸೌಲಭ್ಯಗಳು ಅರ್ಹರಿಗೆ ತಲುಪಿಸಿ ಜೀವನಮಟ್ಟ ಸುಧಾರಿಸಬೇಕು: ಜುಫಿಶಾನ್ ಹಕ್

ವಿಜಯಪುರ, ಸೆ. 23:

ನಗರದ ಸ್ವಚ್ಛತೆ ಮತ್ತು ನೈರ್ಮಲ್ಯ ಕಾಪಾಡುವಲ್ಲಿ ಪೌರಕಾರ್ಮಿಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಅವರ ಹಿತರಕ್ಷಣೆ, ಸುರಕ್ಷತೆ ಹಾಗೂ ಸರ್ಕಾರದ ಸೌಲಭ್ಯಗಳು ಸಮರ್ಪಕವಾಗಿ ತಲುಪುವಂತೆ ಅಧಿಕಾರಿಗಳು ಪರಿಣಾಮಕಾರಿ ಕ್ರಮ ಕೈಗೊಂಡು, ಅವರ ಜೀವನಮಟ್ಟ ಸುಧಾರಣೆಗೆ ಆದ್ಯತೆ ನೀಡಬೇಕು ಎಂದು ವಿಜಯಪುರ ಉಪವಿಭಾಗಾಧಿಕಾರಿ ಜುಫಿಶಾನ್ ಹಕ್ ಸೂಚಿಸಿದರು.



ನಗರದ ಉಪವಿಭಾಗಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬುಧವಾರ ನಡೆದ ಉಪವಿಭಾಗ ಮಟ್ಟದ ಸಫಾಯಿ ಕರ್ಮಚಾರಿ, ಜಾಗೃತಿ ಹಾಗೂ ಉಸ್ತುವಾರಿ ಸಮಿತಿ, ದೌರ್ಜನ್ಯ ತಡೆ ಮತ್ತು ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಗರ ಹಾಗೂ ಪಟ್ಟಣ ಪ್ರದೇಶಗಳಲ್ಲಿ ಕರ್ತವ್ಯ ನಿರ್ವಹಿಸುವ ಪೌರಕಾರ್ಮಿಕರು ಮತ್ತು ಸ್ವಚ್ಛತಾ ಸಿಬ್ಬಂದಿಗೆ ಗುಣಮಟ್ಟದ ಸುರಕ್ಷತಾ ಪರಿಕರಗಳನ್ನು ಕಡ್ಡಾಯವಾಗಿ ಒದಗಿಸಬೇಕು. ಸಿಬ್ಬಂದಿ ಕರ್ತವ್ಯದ ವೇಳೆ ಅವುಗಳನ್ನು ಸಮರ್ಪಕವಾಗಿ ಬಳಸುತ್ತಿರುವುದನ್ನು ಸಂಬಂಧಿಸಿದ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಬೇಕು. ಕಾರ್ಮಿಕರ ಸುರಕ್ಷತೆಯಲ್ಲಿ ಯಾವುದೇ ರೀತಿಯ ನಿರ್ಲಕ್ಷ್ಯವಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ಸೂಚಿಸಿದರು.

ಅರ್ಹ ಪೌರಕಾರ್ಮಿಕರಿಗೆ ವಸತಿ ಸೌಲಭ್ಯ ಕಲ್ಪಿಸುವ ಜತೆಗೆ, ಅವರ ಕುಟುಂಬದ ಅವಲಂಬಿತರಿಗೆ ಕೌಶಲ್ಯಾಭಿವೃದ್ಧಿ ತರಬೇತಿ ಹಾಗೂ ಅಗತ್ಯ ಆರ್ಥಿಕ ನೆರವು ಒದಗಿಸಬೇಕು. ಕುಟುಂಬ ಸದಸ್ಯರು ಸ್ವಾವಲಂಬಿ ಜೀವನ ನಡೆಸಲು ಅಗತ್ಯ ಅವಕಾಶಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದರು.

ಪೌರಕಾರ್ಮಿಕರ ಕುಂದುಕೊರತೆ ಹಾಗೂ ದೂರುಗಳಿಗೆ ಅಧಿಕಾರಿಗಳು ತಕ್ಷಣ ಸ್ಪಂದಿಸಬೇಕು. ಅವರ ಅಹವಾಲುಗಳನ್ನು ಆಲಿಸಿ, ನಿಯಮಾನುಸಾರ ಶೀಘ್ರ ಪರಿಹಾರ ಒದಗಿಸಬೇಕು. ಜಾತಿ ಪ್ರಮಾಣಪತ್ರಕ್ಕೆ ಸಂಬಂಧಿಸಿದ ಸಮಸ್ಯೆಗಳಿದ್ದಲ್ಲಿ ಅವುಗಳನ್ನು ಆದ್ಯತೆ–ಯ ಮೇರೆಗೆ ಬಗೆಹರಿಸುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಸಭೆಯಲ್ಲಿ ತಹಶೀಲ್ದಾರರು, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು, ಪೌರಾಯುಕ್ತರು, ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿಗಳು, ಪೊಲೀಸ್ ಉಪಾಧೀಕ್ಷಕರು, ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಉಪಸ್ಥಿತರಿದ್ದರು.

ಉಪವಿಭಾಗ ಮಟ್ಟದ ಸಫಾಯಿ ಕರ್ಮಚಾರಿ ಸಮಿತಿಯ ನಾಮನಿರ್ದೇಶಿತ ಸದಸ್ಯರಾದ ಭೀಮರಾಯ ಜಿಗಜಿಣಗಿ, ಪರಶುರಾಮ ಪಡಗಾರ್ ಹಾಗೂ ಜಾಗೃತಿ ಸಮಿತಿಯ ನಾಮನಿರ್ದೇಶಿತ ಸದಸ್ಯರಾದ ಮಳಸಿದ್ದ ನಾಯ್ಕೋಡಿ, ಅರವಿಂದ ಡಿ. ಸಾಲವಾಡಗಿ, ಮಹದೇವಪ್ಪ ಸಿ. ಕಾಂಬಳೆ ಮತ್ತು ಪ್ರಸಾದ ಧನಸಿಂಗ ಅವರು ಸಭೆಯಲ್ಲಿ ಭಾಗವಹಿಸಿ ವಿವಿಧ ಸಲಹೆ–ಸೂಚನೆಗಳನ್ನು ನೀಡಿದರು.

# ಪೌರಕಾರ್ಮಿಕರ ಆರೋಗ್ಯ, ಮಕ್ಕಳ ಶಿಕ್ಷಣಕ್ಕೆ ಆದ್ಯತೆ: ಮೇಯರ್ ಕರಡಿ

ಸಂದರ್ಭದಲ್ಲಿಯೂ ಪೌರಕಾರ್ಮಿಕರು ಕರ್ತವ್ಯ ನಿರ್ವಹಿಸಿದ್ದು, ಅವರ ಸೇವೆಯನ್ನು ಗೌರವಿಸಬೇಕು. ಕರ್ತವ್ಯ ನಿರ್ವಹಿಸುವಾಗ ಸಮವಸ್ತ್ರ, ಮಾಸ್ಕ್ ಹಾಗೂ ಸುರಕ್ಷತಾ ಪರಿಕರಗಳನ್ನು ಬಳಸಿಕೊಂಡು ಆರೋಗ್ಯ ಕಾಪಾಡಿಕೊಳ್ಳಬೇಕು. ಸರ್ಕಾರದ ವಿವಿಧ ಯೋಜನೆಗಳ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ಜಿಲ್ಲಾಧಿಕಾರಿ ಡಾ. ಆನಂದ ಕೆ. ಮಾತನಾಡಿ, ಪೌರಕಾರ್ಮಿಕರ ಪರಿಶ್ರಮದಿಂದ ನಗರ ಸ್ವಚ್ಛ ಹಾಗೂ ಸುಂದರವಾಗಿರಲು ಸಾಧ್ಯವಾಗಿದೆ. ಮನೆ–ಮನೆಯಿಂದ ಕಸ ಸಂಗ್ರಹಿಸುವಾಗ ಹಸಿ ಮತ್ತು ಒಣ ಕಸವನ್ನು ಪ್ರತ್ಯೇಕಿಸಿ ನೀಡುವಂತೆ ಸಾರ್ವಜನಿಕರಿಗೆ ತಿಳಿವಳಿಕೆ ನೀಡಬೇಕು. ನಗರದಲ್ಲಿ ಶೇ.80ರಷ್ಟು ಕಸ ವಿಂಗಡಿಸಿ ನೀಡಲಾಗುತ್ತಿದ್ದು, ಉಳಿದವರಲ್ಲಿಯೂ ಈ ಪದ್ಧತಿ ರೂಢಿಸಬೇಕು ಎಂದರು.

ಪೌರಕಾರ್ಮಿಕರು ಪ್ರತಿ ಮೂರು ತಿಂಗಳಿಗೊಮ್ಮೆ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು. ಆರೋಗ್ಯ ಕಾರ್ಡ್‌ಗಳನ್ನು ಸುರಕ್ಷಿತವಾಗಿ ಇಟ್ಟುಕೊಳ್ಳಬೇಕು. ಸರ್ಕಾರದ ಯೋಜನೆಗಳ ಸೌಲಭ್ಯಗಳನ್ನು ಅರ್ಹರಿಗೆ ಆದ್ಯತೆಯಿಂದ ಒದಗಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಪಾಲಿಕೆ ಆಯುಕ್ತ ವಿಜಯ ಮೆಕ್ಕಳಕಿ ಮಾತನಾಡಿ, ಪೌರಕಾರ್ಮಿಕರ ಕಲ್ಯಾಣಕ್ಕಾಗಿ ಹಲವು ಕ್ರಮ ಕೈಗೊಳ್ಳಲಾಗಿದೆ. 116 ಪೌರಕಾರ್ಮಿಕರಿಗೆ ಹಕ್ಕುಪತ್ರ ನೀಡಲಾಗಿದ್ದು, 60 ಮಂದಿಗೆ ಟ್ಯಾಬ್ ವಿತರಿಸಲಾಗಿದೆ. ಸುವಿಧಾ ಕೇಂದ್ರದ ನಿರ್ಮಾಣ ಕಾರ್ಯ ಪೂರ್ಣಗೊಳ್ಳುತ್ತಿದ್ದು, ಶೀಘ್ರದಲ್ಲೇ ಉದ್ಘಾಟಿಸಲಾಗುವುದು ಎಂದರು.

ಪೌರಕಾರ್ಮಿಕರು ದುಶ್ಚಟಗಳಿಂದ ದೂರವಿದ್ದು, ಮಕ್ಕಳ ಶಿಕ್ಷಣಕ್ಕೆ ಆದ್ಯತೆ ನೀಡಬೇಕು. ಉನ್ನತ ಶಿಕ್ಷಣಕ್ಕಾಗಿ ಸರ್ಕಾರದ ವಿವಿಧ ಯೋಜನೆಗಳಿದ್ದು, ಅರ್ಹರು ಸದುಪಯೋಗಪಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ 'ಕರುಳ ಬಳ್ಳಿಯ ಕಂಬನಿಯ ಕಥೆಗಳು' ಪುಸ್ತಕ ಬಿಡುಗ–'ಡೆ ಮಾಡಲಾಯಿತು. ಉತ್ತಮ ಸೇವೆ ಸಲ್ಲಿಸಿದ ಪೌರಕಾರ್ಮಿಕರನ್ನು ಸನ್ಮಾನಿಸಿ, ಕ್ರೀಡಾಕೂಟ ವಿಜೇತರಿಗೆ ಬಹುಮಾನ ಹಾಗೂ ವಿದ್ಯಾರ್ಥಿಗಳಿಗೆ ಟ್ಯಾಬ್ ವಿತರಿಸಲಾಯಿತು.

ಉಪ ಮೇಯರ್ ಸುಮಿತ್ರಾ ಜಾಧವ, ಉಪ ಆಯುಕ್ತ ಮಹಾವೀರ ಬೋರಣ್ಣವರ, ಪಾಲಿಕೆ ಸದಸ್ಯರು, ಸಫಾಯಿ ಕರ್ಮಚಾರಿ ಸಮಿತಿ ಸದಸ್ಯರು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.


## ಚನ್ನಗಿರಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ

# ಸರ್ವ ಸದಸ್ಯರ ವಾರ್ಷಿಕ ಮಹಾಸಭೆ

ಚನ್ನಗಿರಿ : ಪಟ್ಟಣದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ 2025–26ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯು ಬುಧುವಾರ ಸಂಘದ ಆಡಳಿತಾಧಿಕಾರಿ ವಿ.ವಿಜಯ ಇವರ ಅಧ್ಯಕ್ಷತೆಯಲ್ಲಿ ನಡೆಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಅವರು ಈ ಸಂಘದಲ್ಲಿ 2.100ಜನ ನೊಂದಾಯಿತ ಸದಸ್ಯರಿದ್ದು ಇವರೆಲ್ಲರ ಸಹಕಾರದಿಂದ ಈ ಸಹಕಾರ ಸಂಘವು ಲಾಭದಾಯಕದಲ್ಲಿದ್ದು ರೈತರು ಪಡೆದ ಸಾಲವನ್ನು ಸಕಾಲದಲ್ಲಿ ಮರುಪಾವತಿ ಮಾಡುವ ಮೂಲಕ ಸಂಘದ ಪ್ರಗತಿಗೆ ಸಹಕಾರ ನೀಡಿದ್ದಾರೆ ಎಂದರು.

ಈ ಸಹಕಾರ ಸಂಘಕ್ಕೆ ಆಡಳಿತ ಮಂಡಳಿಯ ಸದಸ್ಯರ ಚುನಾವಣೆಯನ್ನು ಮುಂದಿನ 2ತಿಂಗಳ ಒಳಗಾಗಿ ನಡೆಸಲಿದ್ದು ಈಗಾಗಲೇ ಕರಡು ಮತದಾರರ ಪಟ್ಟಿಯನ್ನು ಸಂಘದ ಕಛೇರಿಯಲ್ಲಿ ಪ್ರಕಟಿಸಲಾಗಿದೆ ಎಂದು ತಿಳಿಸಿದರು. ಸಂಘದ ಸರ್ವ ಸದಸ್ಯರ ಸಹಕಾರದಿಂದ ಸಂಘವು 2025–26ನೇ ಸಾಲಿಗೆ 6.70.721ಲಕ್ಷ ಲಾಭವನ್ನು ಗಳಿಸಿದೆ ಎಂದು ತಿಳಿಸಿದರು. ಸಂಘದ ಮುಖ್ಯ ಕಾರ್ಯನಿರ್ವಹಣಾಧಿಕಾರಿ



ಕೆ.ಹೆಚ್.ಸಂತೋಷ್ ಮಾತನಾಡಿ ರೈತರ ಸಹಕಾರದಿಂದ ಸಂಘವು ಪ್ರಗತಿದಾಯವಾಗಿ ಮುನ್ನಡೆಯುತ್ತಿದ್ದು ಇದುವರೆಗೂ ಸಂಘದ ಆಡಳಿತ ಮಂಡಳಿಯಲ್ಲಿ ಕೆಲಸ ಮಾಡಿದ ಎಲ್ಲಾ ನಿರ್ದೇಶಕರು, ಅಧ್ಯಕ್ಷರು ಮತ್ತು ಉಪಾಧ್ಯಕ್ಷರುಗಳ ಸಹಕಾರದಿಂದ ಇಂದು ಸಂಘವು ಪ್ರಗತಿ ಪಥದತ್ತ ಮುನ್ನಡೆಯುತ್ತಿದೆ ಎಂದರು.

ಸಭೆಯಲ್ಲಿ 2025–26ನೇ ಸಾಲಿನ ವಾರ್ಷಿಕ ವರದಿ ಓದಿ ರೆಕಾರ್ಡ ಮಾಡಲಾಯಿತು, ತಾತ್ಕಾಲಿಕ ಆಡಿಟ್ ಆದ ಜಮಾ–ಖರ್ಚು, ಲಾಭ–ನಷ್ಟದ ತ–ಖ್ತೆ, ಆಸ್ತಿ ಜವಾಬ್ದಾರಿ ತಖ್ತೆಗಳನ್ನು ಓದಿ ರೆಕಾರ್ಡ ಮಾಡಲಾಯಿತು. 2026–27ನೇ ಸಾಲಿನ ಆಯ–ವ್ಯಯದ ಮಂಜೂರಾತಿಯನ್ನು ಪಡೆಯಲಾಯಿತು, ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕಿನಿಂದ ಬರಬಹುದಾದ ವಿವಿಧ ಸಾಲಗಳ ಪರಿಮಿತಿಯ ಬಗ್ಗೆ ಚರ್ಚೆ ನಡೆಸಲಾಯಿತು.

# ಜಿ.ಎಂ.ಎಚ್. ಪಿಯು ಕಾಲೇಜಿನಲ್ಲಿ ರಾಷ್ಟ್ರೀಯ ಹಿಂದಿ ದಿವಸ್ ಸಂಭ್ರಮ

ದಾವಣಗೆರೆ: ನಗರದ ಪ್ರತಿಷ್ಠಿತ ಜಿ.ಎಂ. ಹಾಲಮ್ಮ ಪದವಿ ಪೂರ್ವ ಕಾಲೇಜಿನಲ್ಲಿ ಸೆಪ್ಟೆಂಬರ್ 23, 2026 ರಂದು ರಾಷ್ಟ್ರೀಯ ಹಿಂದಿ ದಿವಸ್ ಕಾರ್ಯಕ್ರಮವನ್ನು ಅತ್ಯಂತ ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಕಾಲೇಜಿನ ಸಹ ಆಡಳಿತಾಧಿಕಾರಿ ಜಿ.ಜೆ. ಶಿವಕುಮಾರ್ ಭಾಗವಹಿಸಿದ್ದರು.

ಸಮಾರಂಭವನ್ನು ಉದ್ದೇಶಿಸಿ ಮಾತನಾಡಿದ ಕಾಲೇಜಿನ ಪ್ರಾಂಶುಪಾಲರಾದ ಡಾ. ಓಂಕಾರಪ್ಪ ಹೆಚ್.ಎಸ್., "ಎಲ್ಲಾ ಭಾಷೆಗಳನ್ನು ಸಮಾನವಾಗಿ ಗೌರವಿಸುವುದು ಭಾರತೀಯತೆಯ ವಿಶೇಷತೆ ಹಾಗೂ ದೇಶದ ಏಕತೆಯ ಪ್ರತೀಕವಾಗಿದೆ. ವಿದ್ಯಾರ್ಥಿಗಳು ಕಾಲಕ್ಕೆ ತಕ್ಕಂತೆ ಆಗುವ ಬದಲಾವಣೆಗಳನ್ನು ಸ್ವೀಕರಿಸುವ ಮನೋಭಾವ ಬೆಳೆಸಿಕೊಳ್ಳಬೇಕು. ಪ್ರತಿಯೊಂದು ಭಾಷೆಯ ಬಗ್ಗೆ ಗೌರವ ಮತ್ತು ಭಾಷಾಭಿಮಾನ ಇಟ್ಟುಕೊಳ್ಳುವುದು ವ್ಯಕ್ತಿತ್ವದ ವಿಕಸನಕ್ಕೆ ಸಹಕಾರಿ. ಇದರಿಂದ ವಿದ್ಯಾರ್ಥಿಗಳು ಸಮಾಜದಲ್ಲಿ ಉತ್ತಮ ಸ್ಥಾನಮಾನ, ಗೌರವ ಹಾಗೂ ಪ್ರಶಸ್ತಿ–ಪುರಸ್ಕಾರಗಳನ್ನು ಗಳಿಸಲು ಸಾಧ್ಯ" ಎಂದು ಅಭಿಪ್ರಾಯಪಟ್ಟರು.

EDITOR : S VENKATESULU, D.NO.: 4/38, MAIN ROAD, SETTUR, ANANTHAPUR, ANDHRA PRADESH - 515767, PUBLISHER : S VENKATESULU 237, Ward No 22 Talur Road, Lingamma Compund, Bellary, Bellary, Karnataka - 583101. KARNATAKA - 583113.
OWNER : S VENKATESULU D.NO.: 4/38, MAIN ROAD, SETTUR, ANANTHAPUR, ANDHRA PRADESH - 515767. PRINTER: VADDARA DODDA VEERESH, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583101.